ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 87 | ರಾಯಚೂರು Raichur | 19-09-2026 | ಶನಿವಾರ Saturday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

## 18 ಎಸೆತ, 38 ರನ್: ಜೂನಿಯರ್ DRAVID ಅಬ್ಬರಕ್ಕೆ ಆಸಿಸ್ ತತ್ತರ; 7 ರನ್ ಗಳಿಂದ ಗೆದ್ದ ಭಾರತ U-19 ತಂಡ



# ದೀದಿ ಬೆಂಬಲ ಘೋಷಣೆ ಬೆನ್ನಲ್ಲೇ ನಂದಿಗ್ರಾಮ ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ ಬಂಧನ

ಕೋಲ್ಕತಾ: ಪಶ್ಚಿಮ ಬಂಗಾಳದ ನಂದಿಗ್ರಾಮ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೂ ಮುನ್ನ ರಾಜಕೀಯ ಬೆಳವಣಿಗೆಗಳು ವೇಗ ಪಡೆದುಕೊಂಡಿದ್ದು, ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಬಣವು ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ ಅವರಿಗೆ ಬೆಂಬಲ ಘೋಷಿಸಿದ ಕೆಲವೇ ಗಂಟೆಗಳ ಬಳಿಕ ಅವರನ್ನು ಹಳೆಯ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಬಂಧಿಸಿದ್ದಾರೆ. ಅ.6ರಂದು ನಂದಿಗ್ರಾಮದಲ್ಲಿ ಉಪಚುನಾವಣೆ ನಡೆಯಲಿದ್ದು, ಮತ ಎಣಿಕೆ ಅ.9ರಂದು ನಡೆಯಲಿದೆ.

ಮಮತಾ ಬ್ಯಾನರ್ಜಿ ಬಣದಿಂದ ನಂದಿಗ್ರಾಮದಲ್ಲಿ ಕಣಕ್ಕಿಳಿದಿದ್ದ ಸಂಚಿತಾ ಪ್ರಧಾನ ದೇ ಅವರು ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರನ್ನು ನಬಣ್ಣದಲ್ಲಿ



ಭೇಟಿಯಾದ ಬಳಿಕ ತಮ್ಮ ನಾಮಪತ್ರವನ್ನು ಹಿಂಪಡೆದಿದ್ದರು. ಇದರ ಬೆನ್ನಲ್ಲೇ ಮಮತಾ ಬ್ಯಾನರ್ಜಿ ಅವರು ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ ಅವರಿಗೆ ತಮ್ಮ ಬಣ ಬೆಂಬಲ ನೀಡಲಿದೆ ಎಂದು ಘೋಷಿಸಿದರು.

ಕಾಳಿಘಾಟ್‌ನ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಮಮತಾ ಬ್ಯಾನರ್ಜಿ, ಕಾಂಗ್ರೆಸ್ ಅನ್ನು ರಾಜಕೀಯವಾಗಿ ತಮ್ಮ ಸಹೋದರ ಪಕ್ಷ ಎಂದು ಉಲ್ಲೇಖಿಸಿ, ನಂದಿಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡುವ ನಿರ್ಧಾರವನ್ನು ಇಂಡಿಯಾ ಮೈತ್ರಿಕೂಟವನ್ನು ಬಲಪಡಿಸುವ ಉದ್ದೇಶದಿಂದ ಕೈಗೊಳ್ಳಲಾಗಿದೆ ಎಂದು ಹೇಳಿದರು. ಪಶ್ಚಿಮ ಬಂಗಾಳದಿಂದಲೇ ಪ್ರತಿಪಕ್ಷಗಳ ಒಗ್ಗಟ್ಟಿನ ಸಂದೇಶ ಆರಂಭವಾಗಲಿ ಎಂಬ ಆಶಯವನ್ನೂ ಅವರು ವ್ಯಕ್ತಪಡಿಸಿದರು.

ಆದರೆ ಈ ಬೆಂಬಲ ಘೋಷಣೆಯ ಕೆಲವೇ ಗಂಟೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ ಅವರನ್ನು ಪಶ್ಚಿಮ ಬಂಗಾಳ ಪೊಲೀಸರು ಬಂಧಿಸಿದರು. ಪೊಲೀಸ್ ಮೂಲಗಳನ್ನು ಉಲ್ಲೇಖಿಸಿದ ವರದಿಗಳ ಪ್ರಕಾರ, 2007ರ ನಂದಿಗ್ರಾಮ ಭೂಸ್ವಾಧೀನ ವಿರೋಧಿ ಹೋರಾಟದ ಅವಧಿಗೆ ಸಂಬಂಧಿಸಿದ ಹಳೆಯ ಕೊಲೆ ಪ್ರಕರಣವೊಂದರಲ್ಲಿ ಪ್ರಧಾನ ಅವರ ವಿರುದ್ಧ ಬಾಕಿ ಬಂಧನ ವಾರಂಟ್ ಇತ್ತು. ಆದರೆ ಬಂಧನಕ್ಕೆ ಸಂಬಂಧಿಸಿದ ಪ್ರಕರಣದ ಸಂಪೂರ್ಣ

2ನೇ ಪುಟಕ್ಕೆ

## ಗಾಂಜಾ ಮಾರಾಟ ಆರೋಪ:
## ಇಬ್ಬರ ಬಂಧನ, 1,810 ಗ್ರಾಂ ಒಣ ಗಾಂಜಾ ಜಪ್ತಿ

ರಾಯಚೂರು: ನಗರದ ಅಲ್ಲಮಪ್ರಭು ಕಾಲೋನಿಯ ಹೊರವಲಯದಲ್ಲಿ ಅಕ್ರಮವಾಗಿ ಒಣ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ಇಬ್ಬರನ್ನು ಮಾರ್ಕೆಟ್ ಯಾರ್ಡ್ ಠಾಣೆ ಪೊಲೀಸರು ಬಂಧಿಸಿ, ಅವರಿಂದ 1,810 ಗ್ರಾಂ ಒಣ ಗಾಂಜಾ ಜಪ್ತಿ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ಇಲಾಖೆ ತಿಳಿಸಿದೆ.

ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಜಿ. ಹರೀಶ್, ಪೊಲೀಸ್ ಉಪಾಧೀಕ್ಷಕ ಶಾಂತವೀರ ಈ. ಹಾಗೂ ಪಶ್ಚಿಮ ವೃತ್ತದ ಸಿಪಿಐ ಉಮೇಶ್ ಕಾಂಬ್ಳೆ ಅವರ ಮಾರ್ಗದರ್ಶನದಲ್ಲಿ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯ ಪಿಎಸ್‌ಐ ಮಹ್ಮದ್ ಇಸಾಕ್




ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು. ಅಕ್ರಮ ಗಾಂಜಾ ಮಾರಾಟ ಮತ್ತು ಸಾಗಾಟ ಪತ್ತೆಗಾಗಿ ತಂಡ ಕಾರ್ಯಾಚರಣೆ ನಡೆಸುತ್ತಿತ್ತು.

ಸೆ.17ರಂದು ಮಧ್ಯಾಹ್ನ ದೊರೆತ ಮಾಹಿತಿ ಮೇರೆಗೆ ಪಿಎಸ್‌ಐ ಮಹ್ಮದ್ ಇಸಾಕ್,

2ನೇ ಪುಟಕ್ಕೆ

## ಬರಗಾಲದ ಹಿನ್ನೆಲೆಯಲ್ಲಿ ಬೆಳೆ ಸಮೀಕ್ಷೆ ಸಮರ್ಪಕವಾಗಿ ನಡೆಸಿ: ಜಿಪಂ ಸಿಇಒ ಈಶ್ವರ್ ಕಾಂದೂ



ರಾಯಚೂರು, ಸೆ.18: ಜಿಲ್ಲೆಯಲ್ಲಿ ತೀವ್ರ ಬರಗಾಲ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ಸಮೀಕ್ಷೆಯನ್ನು ಸಮರ್ಪಕವಾಗಿ ದಾಖಲಿಸುವ ಮೂಲಕ ಅರ್ಹ ರೈತರಿಗೆ ಪರಿಹಾರ ದೊರೆಯುವಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಳೆ ಕೊರತೆಯಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗಿದ್ದು, ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಸರ್ಕಾರ ನಿಗದಿಪಡಿಸಿರುವ ಕಾಲಮಿತಿಯೊಳಗೆ ಬೆಳೆ ಸಮೀಕ್ಷೆ ಕಾರ್ಯವನ್ನು ಪೂರ್ಣಗೊಳಿಸುವುದು ಅತ್ಯಂತ ಅಗತ್ಯವಾಗಿದೆ ಎಂದರು.

ಬೆಳೆ ಸಮೀಕ್ಷೆ ವಿಳಂಬವಾದರೆ ರೈತರು ಅಳಿದುಳಿದ ಬೆಳೆಯನ್ನು ಕಟಾವು ಮಾಡಿ ರಾಶಿ ಮಾಡುವ ಸಾಧ್ಯತೆ ಇರುವುದರಿಂದ ನಂತರ ನೈಜ ಬೆಳೆ ಸ್ಥಿತಿಯನ್ನು ದಾಖಲಿಸುವುದು ಕಷ್ಟವಾಗುತ್ತದೆ. ತಾಂತ್ರಿಕ ಕಾರಣಗಳಿಂದ ಬೆಳೆ ವಿಮೆ ಪರಿಹಾರದ ಮೊತ್ತ ಕಡಿತವಾಗದಂತೆ ಎಚ್ಚರಿಕೆ ವಹಿಸಬೇಕು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕೇವಲ ಗ್ರಾಮ ಪಂಚಾಯತಿ ಸಿಬ್ಬಂದಿಯನ್ನು ನಿಯೋಜಿಸದೆ, ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಬೆಳೆ ವಿಮೆ ಏಜೆನ್ಸಿ ಸಿಬ್ಬಂದಿಯೊಂದಿಗೆ ಖುದ್ದಾಗಿ 4-5 ಜಮೀನುಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಸೂಚಿಸಿದರು.

ರೈತರು ಯಾವುದೇ ಬೆಳೆ ಬಿತ್ತನೆ ಮಾಡದಿದ್ದಲ್ಲಿ ಅಂತಹ ಪ್ರದೇಶವನ್ನು ಬಿತ್ತನೆ

2ನೇ ಪುಟಕ್ಕೆ

## ಸೆ.19ರಂದು ಗಿಲ್ಲೇಸೂಗುರದಲ್ಲಿ ಪ್ರಜಾ ಸೇವಾ ಆಂದೋಲನ



ರಾಯಚೂರು: ತಾಲೂಕು ಆಡಳಿತ ಹಾಗೂ ತಾಲೂಕು ಪಂಚಾಯತ್ ರಾಯಚೂರು ಸಹಯೋಗದಲ್ಲಿ, ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರ ಅಧ್ಯಕ್ಷತೆಯಲ್ಲಿ ಗಿಲ್ಲೇಸೂಗುರ ಹೋಬಳಿ ವ್ಯಾಪ್ತಿಯ ಸಾರ್ವಜನಿಕರಿಗಾಗಿ ಸೆ.19ರಂದು ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಗಿಲ್ಲೇಸೂಗುರದ ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಶನಿವಾರ ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ನಡೆಯಲಿದ್ದು, ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎಂಬ ಆಶಯದಡಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸಾಧ್ಯವಾದ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸುವ ಪ್ರಯತ್ನ ಮಾಡಲಾಗುವುದು.

ಕಾರ್ಯಕ್ರಮದಲ್ಲಿ ಗಿಲ್ಲೇಸೂಗುರ ಹೋಬಳಿ ವ್ಯಾಪ್ತಿಯ ಗ್ರಾಮಸ್ಥರು ತಮ್ಮ ಸಮಸ್ಯೆ, ಬೇಡಿಕೆ ಹಾಗೂ ಅಹವಾಲುಗಳನ್ನು ನೇರವಾಗಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಲು ಅವಕಾಶ ಕಲ್ಪಿಸಲಾಗುತ್ತದೆ. ಸಾರ್ವಜನಿಕರಿಂದ ಸ್ವೀಕರಿಸುವ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಪರಿಶೀಲಿಸಿ,

2ನೇ ಪುಟಕ್ಕೆ

## ₹8.80 ಕೋಟಿ ಅಭಿವೃದ್ಧಿ ಕಾಮಗಾರಿಗಳಿಗೆ ಎನ್.ಎಸ್. ಬೋಸರಾಜು, ಶಾಸಕ ಹಂಪಯ್ಯ ನಾಯಕ ಭೂಮಿಪೂಜೆ



ಮಾನ್ವಿ: ಗ್ರಾಮೀಣ ಪ್ರದೇಶಗಳ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದ್ದು, ಗ್ರಾಮಗಳ ಅಗತ್ಯಕ್ಕೆ ಅನುಗುಣವಾಗಿ ಮೂಲಸೌಕರ್ಯಗಳನ್ನು ಕಲ್ಪಿಸಲು ಹೆಚ್ಚಿನ ಅನುದಾನ ಒದಗಿಸಲಾಗುತ್ತಿದೆ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ಮಾನ್ವಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಒಟ್ಟು ₹8.80 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಎನ್.ಎಸ್. ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ ಜಂಟಿಯಾಗಿ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಗ್ರಾಮೀಣ ಭಾಗದ ಜನರಿಗೆ ಅಗತ್ಯವಿರುವ ರಸ್ತೆ, ಚರಂಡಿ, ಶಾಲಾ ಕೊಠಡಿ ಸೇರಿದಂತೆ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಮೂಲಕ ಜನರ ಜೀವನಮಟ್ಟ ಸುಧಾರಿಸುವುದು ಮುಖ್ಯ ಉದ್ದೇಶವಾಗಿದೆ. ಪ್ರತಿಯೊಂದು ಗ್ರಾಮಕ್ಕೂ ಅಗತ್ಯ ಸೌಲಭ್ಯಗಳು ತಲುಪಬೇಕು ಎಂಬ ನಿಟ್ಟಿನಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡಲಾಗುತ್ತಿದೆ ಎಂದು ಬೋಸರಾಜು ತಿಳಿಸಿದರು.

ಆಜಾದಿ ಅಮೃತ ಮಹೋತ್ಸವ ಶಾಲೆಯ ಅಭಿವೃದ್ಧಿಗೆ ₹5 ಲಕ್ಷ, ಹಿರೇಕೊಟ್ನೇಕಲ್ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ₹1.15 ಕೋಟಿ, ಮುದನೂರು ಗ್ರಾಮದಲ್ಲಿ ₹4.60 ಕೋಟಿ ಹಾಗೂ ಕಾತರಕಿ ಗ್ರಾಮದಲ್ಲಿ ₹3 ಕೋಟಿ ವೆಚ್ಚದ ಕಾಮಗಾರಿಗಳಿಗೆ ಚಾಲನೆ

2ನೇ ಪುಟಕ್ಕೆ

## ಬಾಯ್ಕಾಟ್ ಹೆಸರಿನಲ್ಲಿ ಶಾಸಕರ ವಿರುದ್ಧ ಅಪಪ್ರಚಾರ: ಚನ್ನಪ್ಪ ಮಸಿದಾಪುರ



ರಾಯಚೂರು: ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ ಅವರು ಮಲದಕಲ್ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಲು ಆಗಮಿಸಿದ್ದ ವೇಳೆ ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರು ಆತ್ಮೀಯವಾಗಿ ಬರಮಾಡಿಕೊಂಡಿದ್ದಾರೆ. ಇಂತಹ ಸಂದರ್ಭದಲ್ಲೂ ಕೆಲವರು ಬಾಯ್ಕಾಟ್ ಚಳವಳಿ ಹೆಸರಿನಲ್ಲಿ ಶಾಸಕರ ವಿರುದ್ಧ ಪ್ರತಿಭಟನೆ ನಡೆಸಿ ತಪ್ಪು ಸಂದೇಶ ಹರಡಲು ಯತ್ನಿಸಿರುವುದು ಖಂಡನೀಯ ಎಂದು ಜೆಡಿಎಸ್ ಮುಖಂಡ ಚನ್ನಪ್ಪ ಮಸಿದಾಪುರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಾಯ್ಕಾಟ್ ಎಂದರೆ ಇಡೀ ಗ್ರಾಮದ ಜನರು ಒಗ್ಗಟ್ಟಿನಿಂದ ಜನಪ್ರತಿನಿಧಿಯನ್ನು ಬಹಿಷ್ಕರಿಸುವಂತಹ ಪರಿಸ್ಥಿತಿ. ಆದರೆ ಮಲದಕಲ್‌ನಲ್ಲಿ ಅಂತಹ ವಾತಾವರಣವೇ ಇರಲಿಲ್ಲ. ಶಾಸಕರು ಗ್ರಾಮಕ್ಕೆ ಬಂದಾಗ ಗ್ರಾಮಸ್ಥರು, ಸ್ಥಳೀಯ ಮುಖಂಡರು ಹಾಗೂ ಮಹಿಳೆಯರು ಸಾಂಪ್ರದಾಯಿಕವಾಗಿ ಸ್ವಾಗತಿಸಿ, ಪೂಜಾ ಕಾರ್ಯಕ್ರಮ ಮತ್ತು ಅಭಿವೃದ್ಧಿ ಕಾಮಗಾರಿಗಳ ಚಾಲನೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ತಿಳಿಸಿದರು.

ಕೆಲವೇ ಮಂದಿ ನಡೆಸಿದ ಪ್ರತಿಭಟನೆಯನ್ನು ಇಡೀ ಗ್ರಾಮದ ಜನರ ವಿರೋಧ ಎಂಬಂತೆ ಬಿಂಬಿಸುವುದು ವಾಸ್ತವಕ್ಕೆ ದೂರವಾಗಿದೆ. ಗ್ರಾಮದ ಲಿಂಗಪ್ಪ, ಬಾಬು ನಾಯಕ, ದಾದಾಪೀರ್, ಭೀಮೇಶ್ ನಾಯಕ್ ಸೇರಿದಂತೆ ಕೆಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದಾರೆ. ಅವರ ನಿಲುವನ್ನೇ ಸಂಪೂರ್ಣ ಗ್ರಾಮದ ಅಭಿಪ್ರಾಯವೆಂದು ಹೇಳುವುದು ಸರಿಯಲ್ಲ ಎಂದು ಹೇಳಿದರು.

ಶಾಸಕರು ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುತ್ತಿದ್ದು, ಜನರ ಬೇಡಿಕೆ ಮತ್ತು ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದಾರೆ. ಆದರೆ

2ನೇ ಪುಟಕ್ಕೆ

## ಪಕ್ಷವನ್ನು ತಳಮಟ್ಟದಿಂದ ಬಲಪಡಿಸಿ ಎಲ್ಲರನ್ನೂ ಒಗ್ಗೂಡಿಸುವ ಗುರಿ: ಕೆ. ಶಾಂತಪ್ಪ
### ಸೆ.20ರಂದು ಕೆ. ಶಾಂತಪ್ಪ ಜಿಲ್ಲಾಧ್ಯಕ್ಷರಾಗಿ ಪದಗ್ರಹಣ

ರಾಯಚೂರು: ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಕೆ. ಶಾಂತಪ್ಪ ಅವರು ಸೆ.20ರಂದು ಭಾನುವಾರ ಬೆಳಗ್ಗೆ 10 ಗಂಟೆಗೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಅಧಿಕೃತವಾಗಿ ಪದಗ್ರಹಣ ಮಾಡಲಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪಕ್ಷದ ಹಿರಿಯರು ಹಾಗೂ ಕಾರ್ಯಕರ್ತರ ಅಭಿಪ್ರಾಯಕ್ಕೆ ಮನ್ನಣೆ ನೀಡಿ ತಮ್ಮನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆ.ಸಿ. ವೇಣುಗೋಪಾಲ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬಿ.ಕೆ. ಹರಿಪ್ರಸಾದ್, ಸಂಸದ ಕೆ. ಕುಮಾರನಾಯಕ, ವಸಂತಕುಮಾರ್, ಹಂಪನಗೌಡ ಬಾದರ್ಲಿ ಸೇರಿದಂತೆ ಜಿಲ್ಲೆಯ



ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಪಕ್ಷದ ಹಿರಿಯ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು.

ಪಕ್ಷದ ಸಂಘಟನೆಯಲ್ಲಿ ಹೊಸತನ ತರುವುದರ ಜೊತೆಗೆ ತಳಮಟ್ಟದಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಿಷ್ಠಗೊಳಿಸುವ ಉದ್ದೇಶದಿಂದ ಎರಡು ವರ್ಷಗಳ ಹಿಂದೆ ಎಐಸಿಸಿ ಮಟ್ಟದಲ್ಲಿ ಸಂಘಟನಾ ಅಭಿಯಾನಕ್ಕೆ ಚಾಲನೆ ನೀಡಲಾಗಿತ್ತು. ಅದರ ಭಾಗವಾಗಿಯೇ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ವಿಭಿನ್ನ ಮಾದರಿಯಲ್ಲಿ ನಡೆಸಲಾಗಿದೆ ಎಂದು ಶಾಂತಪ್ಪ ವಿವರಿಸಿದರು.

ಹಿಂದೆ ಜಿಲ್ಲಾ ಘಟಕದ ಅಧ್ಯಕ್ಷರ ಆಯ್ಕೆಯಲ್ಲಿ ಪ್ರಮುಖವಾಗಿ ಸ್ಥಳೀಯ ಮುಖಂಡರ ಅಭಿಪ್ರಾಯಕ್ಕೆ ಆದ್ಯತೆ ನೀಡಲಾಗುತ್ತಿತ್ತು. ಆದರೆ ಈ ಬಾರಿ ಸಾಮಾನ್ಯ ಕಾರ್ಯಕರ್ತರಿಂದ ಆರಂಭಿಸಿ ಪಕ್ಷದ ಪ್ರಮುಖ ಮುಖಂಡರು, ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರ ಅಭಿಪ್ರಾಯವನ್ನೂ ಸಂಗ್ರಹಿಸಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿದೆ. ಎಐಸಿಸಿ ವೀಕ್ಷಕರಾಗಿ ಲಕ್ಷ್ಮೀಕಾಂತ್ ಅವರು ಜಿಲ್ಲೆಯ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಕಾರ್ಯಕರ್ತರು ಮತ್ತು ಮುಖಂಡರೊಂದಿಗೆ ಸಮಾಲೋಚನೆ ನಡೆಸಿ ವರದಿ ಸಲ್ಲಿಸಿದ್ದರು ಎಂದು ತಿಳಿಸಿದರು.

ಈ ಪ್ರಕ್ರಿಯೆಯ ಮೂಲಕ ತಮ್ಮ ಮೇಲೆ ವಿಶ್ವಾಸವಿಟ್ಟು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಜವಾಬ್ದಾರಿ ನೀಡಿರುವುದು ಸಂತೋಷ ತಂದಿದೆ ಎಂದ ಅವರು, ಕಳೆದ ಸುಮಾರು 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತನಾಗಿ ಕೆಲಸ ಮಾಡುತ್ತಿದ್ದೇನೆ. ಈ ಅವಧಿಯಲ್ಲಿ ಏಳು ಎಂಟು ಮಂದಿ ಜಿಲ್ಲಾಧ್ಯಕ್ಷರೊಂದಿಗೆ ಪಕ್ಷದ ಸಂಘಟನೆಯಲ್ಲಿ ಕಾರ್ಯನಿರ್ವಹಿಸಿದ ಅನುಭವವಿದೆ. ಆ ಅನುಭವವನ್ನು ಬಳಸಿಕೊಂಡು ಜಿಲ್ಲೆಯಾದ್ಯಂತ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಶ್ರಮಿಸುವುದಾಗಿ ಹೇಳಿದರು.

ಜಿಲ್ಲಾ ಕಾಂಗ್ರೆಸ್‌ನಲ್ಲಿ ಪ್ರತಿಯೊಬ್ಬರ ಅಭಿಪ್ರಾಯಕ್ಕೂ ಗೌರವ ನೀಡಲಾಗುವುದು. ಯಾವುದೇ ರೀತಿಯ ಗುಂಪುಗಾರಿಕೆ ಅಥವಾ ಭಿನ್ನಾಭಿಪ್ರಾ

2ನೇ ಪುಟಕ್ಕೆ

## ಪೊಲೀಸ್ ಪೇದೆ ವಿರುದ್ಧ ಅಕ್ರಮ ಆಸ್ತಿ, ವಂಚನೆ ಆರೋಪ: ಸಮಗ್ರ ತನಿಖೆಗೆ ಆಗ್ರಹ



ರಾಯಚೂರು: ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಪೇದೆ ವಿಜಯಕುಮಾರ ತಂದೆ ಬಾಲನಗೌಡ ಹೊಸಮನಿ ಅವರ ವಿರುದ್ಧ ಅಕ್ರಮ ಆಸ್ತಿ ಸಂಪಾದನೆ, ವಂಚನೆ ಹಾಗೂ ನಂಬಿಕೆ ದ್ರೋಹಕ್ಕೆ ಸಂಬಂಧಿಸಿದ ಹಲವು ಆರೋಪಗಳು ಕೇಳಿಬಂದಿದ್ದು, ಇವುಗಳ ಕುರಿತು ನಿಷ್ಪಕ್ಷಪಾತ ಮತ್ತು ಸಮಗ್ರ ತನಿಖೆ ನಡೆಸಿ ಸತ್ಯಾಸತ್ಯತೆಯನ್ನು ಬಹಿರಂಗಪಡಿಸಬೇಕು ಎಂದು ಪತ್ರಕರ್ತ ಹಾಗೂ ಸಾಮಾಜಿಕ ಕಾರ್ಯಕರ್ತ ಎಸ್.ಕೆ. ಅಮರೇಶ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಜಯಕುಮಾರ ಅವರು ಈ ಹಿಂದೆ ರಾಯಚೂರು ನಗರದಲ್ಲಿ ಸೇವೆ ಸಲ್ಲಿಸಿದ್ದು, ಪ್ರಸ್ತುತ ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾರೆ. ಸೇವಾ ಅವಧಿಯಲ್ಲಿ ತಮ್ಮ ಹುದ್ದೆಯ ಪ್ರಭಾವ ಬಳಸಿಕೊಂಡು ರಿಯಲ್ ಎಸ್ಟೇಟ್ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿದ್ದಾರೆ ಹಾಗೂ ಆದಾಯಕ್ಕೆ ಹೊಂದಿಕೆಯಾಗದ ಆಸ್ತಿಗಳನ್ನು ಗಳಿಸಿದ್ದಾರೆ ಎಂಬ ಆರೋಪಗಳಿವೆ ಎಂದು ಹೇಳಿದರು.

ಲಿಂಗಸುಗೂರು, ಮುದಗಲ್ಲ, ಇಳಕಲ್ ಸೇರಿದಂತೆ ವಿವಿಧ ಕಡೆ ಕುಟುಂಬದ ಸದಸ್ಯರು ಮತ್ತು ಸಂಬಂಧಿಕರ ಹೆಸರಿನಲ್ಲಿ ಆಸ್ತಿಗಳಿರುವ ಕುರಿತು ಕೆಲವು ದಾಖಲೆಗಳು ತಮ್ಮ ಬಳಿ ಲಭ್ಯವಿವೆ ಎಂದು ಹೇಳಿದ ಅವರು, ಶ್ರೀಮತಿ ಹಂಪಮ್ಮ ಗಂಡ ವಿಜಯಕುಮಾರ, ಬಾಲನಗೌಡ ತಂದೆ ಸಂಗನಗೌಡ ಹೊಸಮನಿ ಹಾಗೂ ಜಗದೀಶ ಪ್ರಸಾದ್ ತಂದೆ ಬಾಲನಗೌಡ ಹೊಸಮನಿ ಅವರ ಹೆಸರಿನಲ್ಲಿರುವ ಆಸ್ತಿಗಳ ಮೂಲ, ಖರೀದಿ ವಿವರ ಹಾಗೂ ಆದಾಯದ ಮೂಲಗಳನ್ನು ಸಂಬಂಧಿಸಿದ ತನಿಖಾ ಸಂಸ್ಥೆಗಳು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

2ನೇ ಪುಟಕ್ಕೆ

## ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ಶಾಶ್ವತ ಕಟ್ಟಡ: ನಿವೇಶನ ಮಂಜೂರಿಗೆ ಸಿಎಂ ಸೂಚನೆ



ಕಲಬುರಗಿ: ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ಶಾಶ್ವತ ಕಟ್ಟಡ ನಿರ್ಮಿಸಲು ಅಗತ್ಯವಿರುವ ನಿವೇಶನ ಒದಗಿಸುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ.

ಗುರುವಾರ ಕಲಬುರಗಿಯಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು. ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿ, ನಿವೇಶನ ಮಂಜೂರಾತಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿ ಹಾಗೂ ಕಲಬುರಗಿ ಜಿಲ್ಲಾಧಿಕಾರಿಗೆ ಸೂಚನೆ ನೀಡಿದರು.

ಕಳೆದ ಎರಡು ವರ್ಷಗಳಿಂದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಲೋಕೋಪಯೋಗಿ ಇಲಾಖೆಗೆ

2ನೇ ಪುಟಕ್ಕೆ

## ಯುವ ಸಮುದಾಯವನ್ನು ದುರ್ವ್ಯಸನಗಳಿಂದ ದೂರವಿಡಲು ಎನ್‌ಎಸ್‌ಎಸ್ ಘಟಕ ಬದ್ಧ: ಡಾ. ಸುಗುಣಾ ಬಸವರಾಜ್




ರಾಯಚೂರು: ಯುವ ಸಮುದಾಯವನ್ನು ದುರ್ವ್ಯಸನಗಳಿಂದ ದೂರವಿಟ್ಟು ಆರೋಗ್ಯಕರ ಹಾಗೂ ಉತ್ತಮ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕ ಸದಾ ಬದ್ಧವಾಗಿದ್ದು, ನೂರು ವಾರಗಳ ಸಂಕಲ್ಪ ಅಭಿಯಾನದಡಿ ವಿವಿಧ ಜಾಗೃತಿ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲಾಗುವುದು ಎಂದು ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಾ. ಸುಗುಣಾ ಬಸವರಾಜ್ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಭಾರತ ಸರ್ಕಾರದ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಯುವ ವ್ಯವಹಾರಗಳ ಇಲಾಖೆಯ ಮೈ ಭಾರತ್-ಎನ್‌ಎಸ್‌ಎಸ್ ನಿರ್ದೇಶನಾಲಯದ ವತಿಯಿಂದ ನಶಾ ಮುಕ್ತ್ ಯುವಾ ಫಾರ್ ವಿಕ್ಸಿತ್ ಭಾರತ್ ಸಂಕಲ್ಪ ಅಭಿಯಾನದ ಅಂಗವಾಗಿ ಕಾಲೇಜಿನ ಎನ್‌ಎಸ್‌ಎಸ್ ಘಟಕ ಆಯೋಜಿಸಿದ್ದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಕಸಿತ ಭಾರತಕ್ಕಾಗಿ ವ್ಯಸನಮುಕ್ತ ಯುವ ಸಮುದಾಯವನ್ನು ರೂಪಿಸುವುದು ಅಭಿಯಾನದ ಪ್ರಮುಖ ಆಶಯವಾಗಿದೆ. ಸರ್ಕಾರದ ನಿರ್ದೇಶನ ಹಾಗೂ ಮಾರ್ಗಸೂಚಿಗಳಿಗೆ ಅನುಗುಣವಾಗಿ ನೂರು ವಾರಗಳ ಅಭಿಯಾನದ ಅವಧಿಯಲ್ಲಿ ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸಿ, ಯುವಜನರಲ್ಲಿ ದುರ್ವ್ಯಸನಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುವುದು. ವಿದ್ಯಾರ್ಥಿಗಳ ಆರೋಗ್ಯ, ವ್ಯಕ್ತಿತ್ವ ವಿಕಸನ ಹಾಗೂ ಉತ್ತಮ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ

2ನೇ ಪುಟಕ್ಕೆ

## ಇಂದು ಲಿಂಗಸುಗೂರಿನಲ್ಲಿ ಜಿಲ್ಲಾ ಮಟ್ಟದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ

ರಾಯಚೂರು ಸೆ. 18 (ಕರ್ನಾಟಕ ವಾರ್ತೆ): ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಸೆ. 19ರಂದು ಜಿಲ್ಲಾ ಮಟ್ಟದ ಪ್ರಜಾಸೇವೆ ಆಂದೋಲನ-2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಕೋರಿದ್ದಾರೆ.

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಜಿಲ್ಲೆಯ ಲೋಕಸಭಾ ಸದಸ್ಯರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ ತಮ್ಮ ಅಹವಾಲುಗಳನ್ನು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತು ಪಡೆಯಲು ಅರ್ಜಿ ಸಲ್ಲಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆಪ್ಟಂಬರ್ 28ರಂದು ಹಿರಿಯ ನಾಗರೀಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ

ರಾಯಚೂರು ಸೆ. 18 (ಕರ್ನಾಟಕ ವಾರ್ತೆ): ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಸಹಾ ಜಿಲ್ಲಾ ಮಟ್ಟದಲ್ಲಿ ವಿಶ್ವ ಹಿರಿಯ ನಾಗರೀಕರ ದಿನಾಚರಣೆ-2026ರ ಜಿಲ್ಲಾ ವ್ಯಾಪ್ತಿಯ ಹಿರಿಯ ನಾಗರಿಕರಿಗೆ ಸೆಪ್ಟಂಬರ್ 28ರ ಬೆಳಿಗ್ಗೆ 10.30ಗಂಟೆಗೆ ರಾಯಚೂರು ನಗರದ ಜಿಲ್ಲಾ ಮಹತ್ಮಾಗಾಂಧಿ ಕ್ರೀಡಾಂಗಣದಲ್ಲಿ ಹಿರಿಯ ನಾಗರೀಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ನಾಗರೀಕರ ಭಾಗವಹಿಸಿ ಯಶ್ವಸಿಗೊಳಿಸಬೇಕೆಂದು ಕೋರಲಾಗಿದೆ.

ಮ್ಯೂಸಿಕಲ್ ಚೇರ್ ಮಹಿಳೆಯರು/ಪುರುಷರು 60 ರಿಂದ 70 ವರ್ಷ, ಬಿರುಸಿನ ನಡಿಗೆ ಮಹಿಳೆಯರು/ಪುರುಷರು 60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರು, ಬಕೆಟ್‌ನಲ್ಲಿ ಬಾಲ್ ಎಸೆಯುವುದು ಮಹಿಳೆಯರು/ಪುರುಷರು 60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರು ಭಾಗವಹಿಸಬಹುದಾಗಿದೆ.

ಸಾಂಸ್ಕೃತಿಕ ಸ್ಪರ್ಧೆಗಳಿಗೆ ಸಂಬಧಿಸಿದತೆ ಗಾಯನ ಸ್ಪರ್ಧೆ ಪುರುಷರು/ಮಹಿಳೆಯರು 60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂಮೇಲ್ಪಟ್ಟವರು, ಹಾಗೂ ಏಕ ಪಾತ್ರಾಭಿನಯ ಪುರುಷರು/ಮಹಿಳೆಯರು 60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂಮೇಲ್ಪಟ್ಟವರು ಭಾಗವಹಿಸಬಹುದಾಗಿದೆ.

ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಜಿಲ್ಲಾ ವ್ಯಾಪ್ತಿಯ ಹಿರಿಯ ನಾಗರಿಕರು ಸೆಪ್ಟಂಬರ್ 28ರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಮಹತ್ಮಾಗಾಂಧಿ ಕ್ರೀಡಾಂಗಣದಲ್ಲಿ ಹಾಜರಾಗಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಸಮುದಾಯವನ್ನು ದುರ್ವ್ಯಸನಗಳಿಂದ ದೂರವಿಡಲು ಎನ್ ಎಸ್‌ಎಸ್ ಘಟಕ ಬದ್ಧ: ಡಾ. ಸುಗುಣಾ ಬಸವರಾಜ್

ಎನ್‌ಎಸ್‌ಎಸ್ ಘಟಕ ಕಾರ್ಯನಿರ್ವಹಿಸಲಿದೆ ಎಂದರು.

ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದ ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ಮಾತನಾಡಿ, ಮಾದಕ ಪದಾರ್ಥಗಳ ವ್ಯಸನವು ವ್ಯಕ್ತಿಯ ಆರೋಗ್ಯ ಮತ್ತು ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ವಿಶೇಷವಾಗಿ ಯುವಜನರು ಇಂತಹ ದುರ್ವ್ಯಸನಗಳ ಆಕರ್ಷಣೆಗೆ ಒಳಗಾಗದೆ ತಮ್ಮ ಭವಿಷ್ಯ ರೂಪಿಸಿಕೊಳ್ಳುವುದರೊಂದಿಗೆ ರಾಷ್ಟ್ರ ನಿರ್ಮಾಣದ ಕಡೆಗೆ ಗಮನಹರಿಸಬೇಕು. ನಶಾ ಮುಕ್ತ್ ಯುವಾ ಫಾರ್ ವಿಕ್ಸಿತ್ ಭಾರತ್ ಅಭಿಯಾನ ಯುವಜನರಲ್ಲಿ ಜಾಗೃತಿ ಮೂಡಿಸಲು ಸಹಕಾರಿಯಾಗಲಿ ಎಂದರು.

ವಲಯ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಮಾತನಾಡಿ, ಹರೆಯದಲ್ಲಿ ಯುವಜನರನ್ನು ಆಕರ್ಷಿಸಬಹುದಾದ ವಿವಿಧ ದುಶ್ಚಟಗಳು, ಅವುಗಳಿಂದ ಉಂಟಾಗುವ ಪರಿಣಾಮಗಳು ಹಾಗೂ ಅವುಗಳಿಂದ ದೂರವಿರಲು ಅನುಸರಿಸಬೇಕಾದ ಕ್ರಮಗಳ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.

ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷ ಕುಮಾರ ರೇವೂರ ಪ್ರಾಸ್ತಾವಿಕವಾಗಿ ಮಾತನಾಡಿ, ಅಭಿಯಾನದ ಮೊದಲ ಹಂತವಾಗಿ ಸೆ.18ರಿಂದ ಡಿಸೆಂಬರ್ ಅಂತ್ಯದವರೆಗೆ 12 ವಾರಗಳ ಕಾಲ ಮೈ ಹೆಲ್ತ್-ಮೈ ಫ್ರೈಡ್, ಫಿಟ್ ಯೂಥ್-ಅಡಿಕ್ಷನ್ ಫ್ರಿ ಯೂಥ್, ಲೈಫ್ ಸ್ಕಿಲ್ಸ್ ಮಂಥ್ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ಯುವ ಸಮುದಾಯದ ಆರೋಗ್ಯ ಮತ್ತು ಯೋಗಕ್ಷೇಮದ ಜೊತೆಗೆ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಒತ್ತು ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ವಿಕಸಿತ ಭಾರತಕ್ಕಾಗಿ ವ್ಯಸನಮುಕ್ತ ಯುವಾ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಡಾ. ಜ್ಯೋತಿ ಸಿ.ಕೆ., ಡಾ. ಸಯ್ಯದಾ ರಶೀದಾ ಪರ್ವಿನ್, ಶರಣಗೌಡ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಎನ್‌ಎಸ್‌ಎಸ್ ಸ್ವಯಂಸೇವಕಿಯರಾದ ಜೆ.ಎಸ್. ಸುಷ್ಮಾ, ಅನ್ನಪೂರ್ಣಾ, ಸುವರ್ಣಾ, ಸಂಗೀತಾ, ಭವಾನಿ, ಜಮುನಾ, ಜಮುಲಮ್ಮ ಹಾಗೂ ಮಧುಲತಾ ಕಾರ್ಯಕ್ರಮವನ್ನು ಸಂಘಟಿಸಿ ನಿರ್ವಹಿಸಿದರು.

### ಅಮೃತ ವಾಣಿ

ಬುದ್ಧಿ ಎಷ್ಟೇ ಇದ್ದರೂ ತಾಳ್ಮೆ ಇರದಿದ್ದರೆ ವ್ಯರ್ಥ.

### 1590 ನೆಯ ದಿನಕ್ಕೆ ಏಮ್ಸ್ ಹೋರಾಟ

## ₹8.80 ಕೋಟಿ ಅಭಿವೃದ್ಧಿ ಕಾಮಗಾರಿಗಳಿಗೆ ಎನ್.ಎಸ್. ಬೋಸರಾಜು, ಶಾಸಕ ಹಂಪಯ್ಯ ನಾಯಕ ಭೂಮಿಪೂಜೆ

ನೀಡಲಾಯಿತು. ಶಾಲಾ ಕೊಠಡಿ ನಿರ್ಮಾಣ, ಗ್ರಾಮೀಣ ರಸ್ತೆ ಅಭಿವೃದ್ಧಿ, ಸಿಸಿ ರಸ್ತೆ, ಚರಂಡಿ ಸೇರಿದಂತೆ ವಿವಿಧ ಮೂಲಸೌಕರ್ಯ ಕಾಮಗಾರಿಗಳು ಇದರಲ್ಲಿ ಸೇರಿವೆ.

ಮಂಜೂರಾಗಿರುವ ಕಾಮಗಾರಿಗಳನ್ನು ಗುಣಮಟ್ಟ ಕಾಯ್ದುಕೊಂಡು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಕಾಮಗಾರಿಗಳ ಅನುಷ್ಠಾನದಲ್ಲಿ ಯಾವುದೇ ಲೋಪವಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ನಿಗಾ ವಹಿಸಬೇಕು. ಅಭಿವೃದ್ಧಿ ಕಾಮಗಾರಿಗಳ ಪ್ರಯೋಜನ ಜನರಿಗೆ ಸಮರ್ಪಕವಾಗಿ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಮುಂದಿನ ದಿನಗಳಲ್ಲಿಯೂ ಗ್ರಾಮಗಳ ಅಗತ್ಯಗಳನ್ನು ಗುರುತಿಸಿ ಹಂತ ಹಂತವಾಗಿ ಮತ್ತಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ಅಗತ್ಯ ಅನುದಾನ ಒದಗಿಸಲು ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಡವಿ ಅಮರೇಶ್ವರ ಮಠದ ಶ್ರೀಗಳು, ಕಾಂಗ್ರೆಸ್ ಮುಖಂಡರಾದ ಶರಣಯ್ಯ ನಾಯಕ್, ಸಿದ್ದಲಿಂಗಪ್ಪ ವಕೀಲ್, ಬಾಬು ರಡ್ಡಿ, ಸಂಗಮೇಶ, ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು, ಕಾಂಗ್ರೆಸ್ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಬಾಯ್ಕಾಟ್ ಹೆಸರಿನಲ್ಲಿ ಶಾಸಕರ ವಿರುದ್ಧ ಅಪಪ್ರಚಾರ: ಚನ್ನಪ್ಪ ಮಸಿದಾಪುರ

ಈ ಅಭಿವೃದ್ಧಿ ಚಟುವಟಿಕೆಗಳನ್ನು ಸಹಿಸದ ಕೆಲವರು ರಾಜಕೀಯ ಕಾರಣಕ್ಕಾಗಿ ಪ್ರತಿಭಟನೆಯ ದಾರಿ ಹಿಡಿದು ಜನರಲ್ಲಿ ಗೊಂದಲ ಸೃಷ್ಟಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿದರು.

ಅಭಿವೃದ್ಧಿ ಕಾಮಗಾರಿಗಳಲ್ಲಿ ಲೋಪಗಳಿದ್ದರೆ ಅವುಗಳನ್ನು ಪ್ರಶ್ನಿಸುವ, ಸಲಹೆ ನೀಡುವ ಹಾಗೂ ರಚನಾತ್ಮಕವಾಗಿ ಟೀಕಿಸುವ ಹಕ್ಕು ಎಲ್ಲರಿಗೂ ಇದೆ. ಆದರೆ ರಾಜಕೀಯ ದ್ವೇಷದಿಂದ ಪ್ರತಿಭಟನೆಯನ್ನು ಬಳಸಿಕೊಂಡು ಶಾಸಕರ ವಿರುದ್ಧ ಅಪಪ್ರಚಾರ ನಡೆಸುವುದು ಸೂಕ್ತವಲ್ಲ ಎಂದು ಚನ್ನಪ್ಪ ಮಸಿದಾಪುರ ಹೇಳಿದರು.

ಶಾಸಕರ ಭೇಟಿ ವೇಳೆ ಪ್ರತಿಭಟನೆ ನಡೆಯಬಹುದೆಂಬ ಮಾಹಿತಿ ಪೊಲೀಸರಿಗೆ ಮೊದಲೇ ಇದ್ದರೂ ಸೂಕ್ತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ. ಪ್ರತಿಭಟನಾಕಾರರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವ ಬದಲು ಅವರಿಗೆ ಪರೋಕ್ಷವಾಗಿ ಸಹಕಾರ ನೀಡಿದಂತೆ ಕಂಡುಬಂದಿದೆ. ಈ ಬಗ್ಗೆ ಹಿರಿಯ ಪೊಲೀಸ್ ಅಧಿಕಾರಿಗಳು ಗಮನಹರಿಸಬೇಕು ಎಂದು ಅವರು ಆಗ್ರಹಿಸಿದರು.

ಮಲದಕಲ್ ಗ್ರಾಮದ ಬಹುತೇಕ ಜನರ ನಿಲುವನ್ನು ಕಡೆಗಣಿಸಿ, ಕೆಲವರ ಪ್ರತಿಭಟನೆಯನ್ನೇ ಇಡೀ ಗ್ರಾಮದ ನಿರ್ಧಾರವೆಂದು ತೋರಿಸುವ ಪ್ರಯತ್ನವನ್ನು ಜೆಡಿಎಸ್ ಖಂಡಿಸುತ್ತದೆ. ಜನಪ್ರತಿನಿಧಿಗಳ ಬಗ್ಗೆ ಭಿನ್ನಾಭಿಪ್ರಾಯಗಳಿದ್ದರೆ ಅವುಗಳನ್ನು ಪ್ರಜಾಸತ್ತಾತ್ಮಕ ಹಾಗೂ ಶಾಂತಿಯುತ ಮಾರ್ಗದಲ್ಲಿ ವ್ಯಕ್ತಪಡಿಸಬೇಕು. ಪ್ರತಿಭಟನೆಯ ನೆಪದಲ್ಲಿ ವೈಯಕ್ತಿಕ ಅಥವಾ ರಾಜಕೀಯ ದ್ವೇಷ ಸಾಧಿಸುವ ಪ್ರಯತ್ನಕ್ಕೆ ಅವಕಾಶ ನೀಡಬಾರದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮರಿಯಣ್ಣ ನಾಯಕ್, ಮೆಹಬೂಬ್ ಸೇರಿದಂತೆ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸೆ.20ರಂದು ಕೆ. ಶಾಂತಪ್ಪ ಜಿಲ್ಲಾಧ್ಯಕ್ಷರಾಗಿ ಪದಗ್ರಹಣ

ಯಗಳಿದ್ದರೂ ಅವುಗಳನ್ನು ಬದಿಗಿಟ್ಟು ಎಲ್ಲ ಮುಖಂಡರು ಮತ್ತು ಕಾರ್ಯಕರ್ತರನ್ನು ಒಂದೇ ವೇದಿಕೆಗೆ ತರುವ ಪ್ರಯತ್ನ ಮಾಡುತ್ತೇನೆ. ವೈಯಕ್ತಿಕ ಭಿನ್ನತೆಗಳಿಗಿಂತ ಪಕ್ಷದ ಹಿತವೇ ಮುಖ್ಯ. ''ನಮ್ಮದು ಕಾಂಗ್ರೆಸ್ ಪಕ್ಷ, ಕಾಂಗ್ರೆಸ್ ಪಕ್ಷವೇ ನಮ್ಮ ಬಣ್ಣ'' ಎಂಬ ಮನೋಭಾವದೊಂದಿಗೆ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಅವರು ಕರೆ ನೀಡಿದರು.

ಸೆ.20ರಂದು ನಡೆಯಲಿರುವ ಪದಗ್ರಹಣ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಪಕ್ಷದ ಹಲವು ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ. ಜಿಲ್ಲೆಯ ವಿವಿಧ ಭಾಗಗಳಿಂದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸದ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮವನ್ನು ಮಾತ್ರ ಆಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಜಿಲ್ಲಾ ಘಟಕದ ಇತರೆ ಪದಾಧಿಕಾರಿಗಳ ನೇಮಕ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಅವರಿಗಾಗಿ ಪ್ರತ್ಯೇಕ ಪದಗ್ರಹಣ ಸಮಾರಂಭ ನಡೆಸಲಾಗುವುದು ಎಂದು ಕೆ. ಶಾಂತಪ್ಪ ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಮಹಮ್ಮದ್ ಶಾಲಾಂ, ಜಯಂತ್ ರಾವ್ ಪತಂಗಿ, ಶಿವಮೂರ್ತಿ, ಮಾಡಗಿರಿ, ನರಸಿಂಹಲು, ಜಯಣ್ಣ, ಆಂಜನೇಯ, ಸಾಜಿದ್ ಸರ್ಮೀ,ರ್ ಅಮರೇಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪೊಲೀಸ್ ಪೇದೆ ವಿರುದ್ಧ ಅಕ್ರಮ ಆಸ್ತಿ, ವಂಚನೆ ಆರೋಪ: ಸಮಗ್ರ ತನಿಖೆಗೆ ಆಗ್ರಹ

ಕುಟುಂಬದ ಹೆಸರಿನಲ್ಲಿರುವ ಆಸ್ತಿಗಳ ಒಟ್ಟು ಮೌಲ್ಯ ₹10 ಕೋಟಿಗೂ ಅಧಿಕವಾಗಿರಬಹುದು ಎಂಬ ಆರೋಪವಿದ್ದು, ಈ ಅಂಶವನ್ನು ಅಧಿಕೃತ ತನಿಖೆಯ ಮೂಲಕವೇ ದೃಢಪಡಿಸಬೇಕು. ಆಸ್ತಿ ದಾಖಲೆಗಳು, ಬ್ಯಾಂಕ್ ವ್ಯವಹಾರಗಳು ಹಾಗೂ ಆದಾಯದ ಮೂಲಗಳನ್ನು ಪರಿಶೀಲಿಸಿದರೆ ವಾಸ್ತವಾಂಶ ಹೊರಬರಲಿದೆ ಎಂದು ಅಮರೇಶ ಹೇಳಿದರು.

ವಿಜಯಕುಮಾರ ಅವರ ವಿರುದ್ಧ ಈ ಹಿಂದೆಯೂ ಇಲಾಖಾ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ ಅವರು, 2024ರ ಡಿಸೆಂಬರ್ 26ರಂದು ಅಂದಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಪುಟ್ಟ ಮಾದಯ್ಯ ಅವರು ಅವರನ್ನು ಅಮಾನತುಗೊಳಿಸಿದ್ದರು ಎಂಬ ಮಾಹಿತಿ ಇದೆ. ಈ ಕುರಿತು ಇಲಾಖೆಯ ದಾಖಲೆಗಳು ಹಾಗೂ ಅಂದಿನ ವರದಿಗಳನ್ನು ಪರಿಶೀಲಿಸಿ, ಹಿಂದೆ ಕೈಗೊಂಡ ಕ್ರಮಗಳ ವಿವರಗಳನ್ನೂ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಹನುಮಂತ ಆರೋಲಿಕರ್ ಮಾತನಾಡಿ, ಲಿಂಗಸುಗೂರು ತಾಲೂಕಿನಲ್ಲಿ ವಿಜಯಕುಮಾರ ಅವರು ರಿಯಲ್ ಎಸ್ಟೇಟ್ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿದ್ದರು ಎಂಬ ಆರೋಪ ಕೇಳಿಬಂದಿದೆ. ಪ್ರಥಾಪ್ ರೆಡ್ಡಿ ಸೇರಿದಂತೆ ಕೆಲವರೊಂದಿಗೆ ಪಾಲುದಾರಿಕೆಯಲ್ಲಿ ಬಡಾವಣೆ ಅಭಿವೃದ್ಧಿ ಹಾಗೂ ಆಸ್ತಿ ವ್ಯವಹಾರ ನಡೆಸಿ, ನಂತರ ಹಣಕಾಸಿನ ವಿಚಾರದಲ್ಲಿ ವಿವಾದ ಉಂಟಾಗಿದೆ ಎಂಬ ದೂರುಗಳಿವೆ. ಈ ಎಲ್ಲ ಆರೋಪಗಳ ಸತ್ಯಾಸತ್ಯತೆಯನ್ನು ದಾಖಲೆ ಆಧಾರದಲ್ಲಿ ಪರಿಶೀಲಿಸಬೇಕು ಎಂದು ಹೇಳಿದರು.

ಗುರುಗುಂಟಾ ಹೋಬಳಿಯ ಭೀಮಣ್ಣ ಎಂಬ ರೈತನ ಜಮೀನು ವ್ಯವಹಾರದಲ್ಲಿಯೂ ವಂಚನೆ ನಡೆದಿದೆ ಎಂಬ ಆರೋಪವಿದ್ದು, ಪೊಲೀಸ್ ಠಾಣೆಗೆ ಬಂದ ಸಂದರ್ಭದಲ್ಲಿ ಉಂಟಾದ ಪರಿಚಯದ ಬಳಿಕ ದಾಖಲೆಗಳಿಗೆ ಸಹಿ ಪಡೆದು ಜಮೀನು ವ್ಯವಹಾರದಲ್ಲಿ ತೊಂದರೆ ಉಂಟುಮಾಡಲಾಗಿದೆ ಎಂಬ ದೂರು ಕೇಳಿಬಂದಿದೆ. ಸಂಬಂಧಿಸಿದ ಜಮೀನು ದಾಖಲೆಗಳು, ಒಪ್ಪಂದ ಪತ್ರಗಳು ಹಾಗೂ ದೂರುಗಳನ್ನು ಪರಿಶೀಲಿಸಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ, ಬಾಲನಗೌಡ ಹೊಸಮನಿ ಅವರ ಹೆಸರಿನಲ್ಲಿದ್ದ ಒಂದು ಎಕರೆ ಜಮೀನನ್ನು ₹95 ಲಕ್ಷಕ್ಕೆ ಖರೀದಿಸುವುದಾಗಿ ಹೇಳಿ ₹44 ಲಕ್ಷ ಮುಂಗಡ ಪಾವತಿಸಲಾಗಿದೆ ಎಂದು ತೋರಿಸುವ ವಿವಾದಿತ ಖರೀದಿ ಪತ್ರದ ಕುರಿತು ಸಹ ಆರೋಪಗಳಿವೆ ಎಂದು ತಿಳಿಸಿದರು. 2023ರ ಮಾರ್ಚ್ 6ರಂದು ಸಿದ್ಧಪಡಿಸಲಾಗಿದೆ ಎನ್ನಲಾಗಿರುವ ಬಾಂಡ್‌ಗೆ ಸಂಬಂಧಿಸಿದ ಪ್ರಕರಣದಿಂದ ಲಿಂಗಸುಗೂರಿನ ಹನಮಯ್ಯ ತಂದೆ ರಾಮಚಂದ್ರಪ್ಪ ಅವರಿಗೆ ಸಮಸ್ಯೆ ಉಂಟಾಗಿದೆ ಎಂಬುದಾಗಿ ಹೇಳಿದರು. ಪ್ರಕರಣ ನ್ಯಾಯಾಲಯದ ವಿಚಾರಣೆಯಲ್ಲಿರುವುದರಿಂದ, ನ್ಯಾಯಾಲಯದ ದಾಖಲೆಗಳು ಮತ್ತು ಸಂಬಂಧಿಸಿದ ಸಾಕ್ಷ್ಯಗಳನ್ನು ಆಧರಿಸಿಯೇ ವಾಸ್ತವಾಂಶ ನಿರ್ಧಾರವಾಗಬೇಕು ಎಂದರು.

ಜಯ ಕರ್ನಾಟಕ ರಕ್ಷಣಾ ಸೇನೆಯ ತಾಲೂಕು ಅಧ್ಯಕ್ಷ ಹನುಮಂತ ನಾಯಕ ಮಾತನಾಡಿ, ಪೊಲೀಸ್ ಹುದ್ದೆಯ ಪ್ರಭಾವವನ್ನು ಬಳಸಿಕೊಂಡು ಬಡವರು, ರೈತರು ಹಾಗೂ ಸರ್ಕಾರಿ ನೌಕರರ ಮೇಲೆ ಒತ್ತಡ ಹೇರುವ ಮೂಲಕ ಆಸ್ತಿ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ. ಇಂತಹ ಗಂಭೀರ ಆರೋಪಗಳ ಕುರಿತು ಪೊಲೀಸ್ ಇಲಾಖೆಯ ಜೊತೆಗೆ ಭ್ರಷ್ಟಾಚಾರ ಮತ್ತು ಆರ್ಥಿಕ ಅಪರಾಧಗಳಿಗೆ ಸಂಬಂಧಿಸಿದ ತನಿಖಾ ಸಂಸ್ಥೆಗಳೂ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು.

ವಿಜಯಕುಮಾರ ಹಾಗೂ ಅವರ ಕುಟುಂಬದ ಸದಸ್ಯರ ಹೆಸರಿನಲ್ಲಿರುವ ಆಸ್ತಿಗಳು, ರಿಯಲ್ ಎಸ್ಟೇಟ್ ವ್ಯವಹಾರಗಳು, ಹಣಕಾಸಿನ ವಹಿವಾಟುಗಳು ಹಾಗೂ ಆದಾಯದ ಮೂಲಗಳ ಕುರಿತು ಸಮಗ್ರ ತನಿಖೆ ನಡೆಯಬೇಕು. ಆರೋಪಗಳಿಗೆ ಸಾಕ್ಷ್ಯ ದೊರೆತಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ಆರೋಪಗಳು ದೃಢಪಡದಿದ್ದರೆ ಅದನ್ನೂ ಅಧಿಕೃತವಾಗಿ ಸ್ಪಷ್ಟಪಡಿಸಿ ಅನಗತ್ಯ ಗೊಂದಲಕ್ಕೆ ತೆರೆ ಎಳೆಯಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಲಾಯಿತು.

## ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ಶಾಶ್ವತ ಕಟ್ಟಡ: ನಿವೇಶನ ಮಂಜೂರಿಗೆ ಸಿಎಂ ಸೂಚನೆ

ಸೇರಿದ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸ್ಥಳವು ಆಯೋಗದ ನ್ಯಾಯಾಲಯದ ಕಲಾಪಗಳನ್ನು ನಡೆಸಲು ಸಮರ್ಪಕವಾಗಿಲ್ಲ. ಹೀಗಾಗಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲವಾಗುವಂತೆ ಪೀಠಕ್ಕೆ ಸ್ವಂತ ಕಟ್ಟಡ ನಿರ್ಮಿಸುವ ಅಗತ್ಯವಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಕಲಬುರಗಿ ಹೈಕೋರ್ಟ್ ಪೀಠದ ಸಮೀಪ, ನಗರದ ವರ್ತುಲ ರಸ್ತೆಯ ಅಕ್ಕಮಹಾದೇವಿ ಬಡಾವಣೆಯಲ್ಲಿ ಕರ್ನಾಟಕ ಗೃಹ ಮಂಡಳಿಗೆ ಸೇರಿದ ಸುಮಾರು 110 ಗುಂಟೆ ಜಾಗವಿದೆ. ಈ ಪೈಕಿ 10 ಗುಂಟೆ ಜಾಗವನ್ನು ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ಮಂಜೂರು ಮಾಡುವಂತೆ ಈಗಾಗಲೇ ಕರ್ನಾಟಕ ಗೃಹ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಪ್ರಸ್ತಾವನೆಗೆ ಅನುಮೋದನೆ ನೀಡಿ ನಿವೇಶನ ಮಂಜೂರು ಮಾಡಬೇಕೆಂದು ಮುಖ್ಯಮಂತ್ರಿಗೆ ಕೋರಲಾಗಿದೆ.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಹ ಕಲಬುರಗಿ ಪೀಠಕ್ಕೆ ಸೂಕ್ತ ನಿವೇಶನ ದೊರಕಿಸಿಕೊಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿಗೆ ಸೇವೆ ಒದಗಿಸುತ್ತಿರುವ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠಕ್ಕೆ ಶಾಶ್ವತ ಹಾಗೂ ಸುಸಜ್ಜಿತ ಸ್ವಂತ ಕಟ್ಟಡದ ಅಗತ್ಯವಿದೆ ಎಂಬುದನ್ನು ಮನವಿ ಪತ್ರದಲ್ಲಿ ಮುಖ್ಯವಾಗಿ ಪ್ರಸ್ತಾಪಿಸಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್ ತಿಳಿಸಿದ್ದಾರೆ.

### ಮೊದಲನೇ ಪುಟದಿಂದ

## ದೀದಿ ಬೆಂಬಲ ಘೋಷಣೆ ಬೆನ್ನಲ್ಲೇ ನಂದಿಗ್ರಾಮ ಕಾಂಗ್ರೆಸ್ ಅಭ್ಯರ್ಥಿ ಮಿಲನ್ ಪ್ರಧಾನ ಬಂಧನ

ವಿವರಗಳು ಇನ್ನೂ ಅಧಿಕೃತವಾಗಿ ಬಹಿರಂಗವಾಗಿಲ್ಲ.

ಬಂಧನದ ಸಮಯದ ಬಗ್ಗೆ ಕಾಂಗ್ರೆಸ್ ಆಕ್ಷೇಪ ವ್ಯಕ್ತಪಡಿಸಿದೆ. ಮಮತಾ ಬಣ ಬೆಂಬಲ ಘೋಷಿಸಿದ ಬೆನ್ನಲ್ಲೇ ಅಭ್ಯರ್ಥಿಯನ್ನು ಬಂಧಿಸಿರುವುದರ ಹಿಂದೆ ರಾಜಕೀಯ ಉದ್ದೇಶವಿದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ. ಆದರೆ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು, ಚುನಾವಣೆ ಸಂದರ್ಭದಲ್ಲಿ ಬಾಕಿ ಉಳಿದಿರುವ ಹಳೆಯ ಬಂಧನ ವಾರಂಟ್‌ಗಳನ್ನು ಪರಿಶೀಲಿಸುವುದು ಸಾಮಾನ್ಯ ಪ್ರಕ್ರಿಯೆಯಾಗಿದ್ದು, ಮಿಲನ್ ಪ್ರಧಾನ ವಿರುದ್ಧ ಬಾಕಿ ವಾರಂಟ್ ಕಂಡುಬಂದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್‌ಗೆ ತಿಳಿಸಿದ್ದಾರೆ. ನ್ಯಾಯಾಲಯದಿಂದ ಅವರಿಗೆ ಯಾವುದೇ ರಕ್ಷಣಾತ್ಮಕ ಆದೇಶ ಇರಲಿಲ್ಲ ಎಂದೂ ಅಧಿಕಾರಿ ಹೇಳಿದ್ದಾರೆ.

2007ರ ನಂದಿಗ್ರಾಮ ಭೂಸ್ವಾಧೀನ ವಿರೋಧಿ ಹೋರಾಟವು ಪಶ್ಚಿಮ ಬಂಗಾಳದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಘಟನೆಯಾಗಿತ್ತು. ಆ ಹೋರಾಟವು ಆಗಿನ ಎಡರಂಗ ಸರ್ಕಾರದ ವಿರುದ್ಧ ತೃಣಮೂಲ ಕಾಂಗ್ರೆಸ್‌ನ ರಾಜಕೀಯ ಚಳವಳಿಗೆ ಬಲ ನೀಡಿದ್ದು, 2011ರಲ್ಲಿ 34 ವರ್ಷಗಳ ಎಡರಂಗ ಆಡಳಿತ ಅಂತ್ಯಗೊಂಡು ತೃಣಮೂಲ ಕಾಂಗ್ರೆಸ್ ಅಧಿಕಾರಕ್ಕೆ ಬರುವ ರಾಜಕೀಯ ಬೆಳವಣಿಗೆಗಳಲ್ಲಿ ಪ್ರಮುಖ ಪಾತ್ರ ವಹಿಸಿತ್ತು.

ಇತ್ತ ಕಾಂಗ್ರೆಸ್ ಹಿರಿಯ ನಾಯಕ ಅಧೀರ್ ರಂಜನ್ ಚೌಧರಿ, ಮಮತಾ ಬ್ಯಾನರ್ಜಿ ಅವರ ಬೆಂಬಲ ಘೋಷಣೆಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್ ತೃಣಮೂಲ ಬಣದ ಬೆಂಬಲವನ್ನು ಕೇಳಿರಲಿಲ್ಲ ಎಂದು ಹೇಳಿದ್ದಾರೆ. ಮಮತಾ ಅವರು ತಮ್ಮ ರಾಜಕೀಯ ನಿರ್ಧಾರವನ್ನು ಪ್ರಕಟಿಸಲು ಸ್ವತಂತ್ರರಾಗಿದ್ದಾರೆ. ಆದರೆ ಮೊದಲು ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳಿಸಿ, ಆ ಅಭ್ಯರ್ಥಿ ನಾಮಪತ್ರ ಹಿಂಪಡೆದ ಬಳಿಕ ಕಾಂಗ್ರೆಸ್‌ಗೆ ಬೆಂಬಲ ನೀಡುವುದಾಗಿ ಘೋಷಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

2026ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಸುವೇಂದು ಅಧಿಕಾರಿ ನಂದಿಗ್ರಾಮ ಮತ್ತು ಭವಾನಿಪುರ ಎರಡೂ ಕ್ಷೇತ್ರಗಳಿಂದ ಗೆದ್ದಿದ್ದರು. ಬಳಿಕ ಅವರು ಭವಾನಿಪುರ ಕ್ಷೇತ್ರವನ್ನು ಉಳಿಸಿಕೊಂಡು ನಂದಿಗ್ರಾಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ಉಪಚುನಾವಣೆ ಎದುರಾಗಿದೆ. ಪ್ರಸ್ತುತ ಸುವೇಂದು ಅಧಿಕಾರಿ ಪಶ್ಚಿಮ ಬಂಗಾಳದ ಮುಖ್ಯಮಂತ್ರಿಯಾಗಿದ್ದಾರೆ.

ನಂದಿಗ್ರಾಮ ಉಪಚುನಾವಣೆಗೆ ಮುನ್ನ ಮಮತಾ ಬಣದ ಅಭ್ಯರ್ಥಿಯ ನಾಮಪತ್ರ ಹಿಂಪಡೆಯುವುದು, ಕಾಂಗ್ರೆಸ್ ಅಭ್ಯರ್ಥಿಗೆ ಮಮತಾ ಬಣದ ಬೆಂಬಲ ಹಾಗೂ ಅದರ ಕೆಲವೇ ಗಂಟೆಗಳ ಬಳಿಕ ಮಿಲನ್ ಪ್ರಧಾನ ಬಂಧನವಾಗಿರುವುದು ಚುನಾವಣಾ ರಾಜಕೀಯವನ್ನು ಮತ್ತಷ್ಟು ಚರ್ಚೆಗೆ ತಂದಿದೆ. ಬಂಧನ ಪ್ರಕರಣದ ಮುಂದಿನ ಕಾನೂನು ಪ್ರಕ್ರಿಯೆ ಹಾಗೂ ರಾಜಕೀಯ ಪಕ್ಷಗಳ ಮುಂದಿನ ನಿಲುವು ಈಗ ಗಮನ ಸೆಳೆದಿದೆ.

## ಇಬ್ಬರ ಬಂಧನ, 1,810 ಗ್ರಾಂ ಒಣ ಗಾಂಜಾ ಜಪ್ತಿ

ಗೆಜೆಟೆಡ್ ಅಧಿಕಾರಿ ಹಾಗೂ ಡ್ರಗ್ಸ್ ಕಂಟ್ರೋಲರ್ ಸಚಿನ್, ಸರ್ಕಾರಿ ಪಂಚರು ಮತ್ತು ಪೊಲೀಸ್ ಸಿಬ್ಬಂದಿಯೊಂದಿಗೆ ಅಲ್ಲಮಪ್ರಭು ಕಾಲೋನಿಯ ಹೊರವಲಯದಲ್ಲಿ ಕಾರ್ಯಾಚರಣೆ ನಡೆಸಿದರು.

ಈ ವೇಳೆ ಅಕ್ರಮವಾಗಿ ಒಣ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ಎಲ್‌ಬಿಎಸ್ ನಗರದ ನಿವಾಸಿಗಳಾದ ಮೊಹ್ಮದ್ ಕೈಫ್ (20) ಹಾಗೂ ಹುಸೇನ್ ಬಾಷಾ (23) ಅವರನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಗಳ ಬಳಿ ಇದ್ದ ಸುಮಾರು ₹36 ಸಾವಿರ ಮೌಲ್ಯದ 1,810 ಗ್ರಾಂ ಒಣ ಗಾಂಜಾವನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಪಿಎಸ್‌ಐ ಮಹ್ಮದ್ ಇಸಾಕ್, ಸಿಬ್ಬಂದಿಗಳಾದ ಮಹ್ಮದ್ ರಫೀ, ಶರಣಬಸವ, ತನಿಖಾ ಸಹಾಯಕರಾದ ಶಿವಮೂರ್ತೆಪ್ಪ, ಗುರುಸ್ವಾಮಿ ಹಾಗೂ ಜೀಪ್ ಚಾಲಕ ವೆಂಕಟೇಶ ಪಾಲ್ಗೊಂಡಿದ್ದರು. ಕಾರ್ಯಾಚರಣೆ ನಡೆಸಿದ ಪೊಲೀಸ್ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷು ಗಿರಿ ಶ್ಲಾಘಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬರಗಾಲದ ಹಿನ್ನೆಲೆಯಲ್ಲಿ ಬೆಳೆ ಸಮೀಕ್ಷೆ ಸಮರ್ಪಕವಾಗಿ ನಡೆಸಿ: ಜಿಪಂ ಸಿಇಒ ಈಶ್ವರ್ ಕಾಂದೂ

ಇಲ್ಲದ ಪ್ರದೇಶ ಎಂದು ದಾಖಲಿಸಿ ಸಂಬಂಧಿಸಿದ ರೈತರಿಗೆ ಪ್ರಮಾಣಪತ್ರ ನೀಡಬೇಕು. ಬರಗಾಲದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸಾಧ್ಯವಾದಷ್ಟು ನೆರವು ದೊರಕಿಸಲು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದರು.

ತುಂಗಭದ್ರಾ ಎಡದಂಡೆ ನಾಲೆಗೆ ನೀರು ಹರಿಸಲಾಗುತ್ತಿದ್ದು, ಕೊನೆಯ ಭಾಗದ ರೈತರಿಗೂ ನೀರು ತಲುಪಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳನ್ನು ಪಾಳಿಯಂತೆ ನಿಯೋಜಿಸಲಾಗುವುದು. ಬರಗಾಲದ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವುದಕ್ಕೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ನೀರಿನ ತೊಟ್ಟಿಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಿ, ಸ್ವಚ್ಛಗೊಳಿಸಿದ ಜಿಪಿಎಸ್ ಛಾಯಾಚಿತ್ರಗಳನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ದಾಖಲಿಸಬೇಕು. ಸ್ಥಳೀಯರಿಂದ ಸಹಿ ಪಡೆದುಕೊಳ್ಳುವುದರ ಜೊತೆಗೆ ಎಫ್‌ಟಿಕೆ ಕಿಟ್ ಮೂಲಕ ನೀರಿನ ಗುಣಮಟ್ಟ ಪರೀಕ್ಷಿಸಬೇಕು. ಶುದ್ಧ ಕುಡಿಯುವ ನೀರಿನ ಘಟಕಗಳ ಸಮರ್ಪಕ ನಿರ್ವಹಣೆಗೂ ಅಧಿಕಾರಿಗಳು ಗಮನಹರಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರು ಪೂರೈಕೆಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ₹1 ಕೋಟಿ ಬಿಡುಗಡೆಯಾಗಲಿದ್ದು, ಬೋರ್‌ವೆಲ್‌ಗಳ ದುರಸ್ತಿ ಹಾಗೂ ಅಗತ್ಯವಿರುವ ಕಡೆ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯಲು ಕ್ರಿಯಾ ಯೋಜನೆ ಸಿದ್ಧಪಡಿಸಬೇಕು ಎಂದರು.

ಗ್ರಾಮ ಪಂಚಾಯತಿಗಳ ಆರ್ಥಿಕ ಸಂಪನ್ಮೂಲ ಹೆಚ್ಚಿಸುವ ನಿಟ್ಟಿನಲ್ಲಿ ತೆರಿಗೆ ವಸೂಲಾತಿಗೆ ಆದ್ಯತೆ ನೀಡಬೇಕು. ಸಿಬ್ಬಂದಿ ವೇತನ, ಬೀದಿ ದೀಪಗಳ ನಿರ್ವಹಣೆ ಸೇರಿದಂತೆ ವಿವಿಧ ಸ್ಥಳೀಯ ಅಗತ್ಯಗಳಿಗೆ ತೆರಿಗೆ ಆದಾಯವನ್ನು ಬಳಸಿಕೊಳ್ಳಬಹುದಾಗಿದೆ. ಆದ್ದರಿಂದ ಗ್ರಾಮ ಪಂಚಾಯತಿಗಳಲ್ಲಿ ತಂಡಗಳನ್ನು ರಚಿಸಿ ತೆರಿಗೆ ವಸೂಲಾತಿ ಕಾರ್ಯವನ್ನು ಚುರುಕುಗೊಳಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ಬೆಂಕಿ ಅವಘಡ, ಪ್ರವಾಹ ಸೇರಿದಂತೆ ವಿವಿಧ ಪ್ರಾಕೃತಿಕ ವಿಕೋಪಗಳ ಸಂದರ್ಭದಲ್ಲಿ ಸಾರ್ವಜನಿಕರ ಪ್ರಾಣ ರಕ್ಷಣೆಗೆ ನೆರವಾಗುವ ಉದ್ದೇಶದಿಂದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಕಿಟ್‌ಗಳನ್ನು ಸಾಂಕೇತಿಕವಾಗಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿತರಿಸಲಾಯಿತು.

ಜಿಲ್ಲೆಯಾದ್ಯಂತ ಮನೆಮನೆಗೆ ತೆರಳಿ ಶೌಚಾಲಯ ಸಮೀಕ್ಷೆಯನ್ನು 15 ದಿನಗಳೊಳಗೆ ನಡೆಸಬೇಕು. ಜಿಲ್ಲಾ ಪಂಚಾಯತಿಯಿಂದ ನೀಡಲಾಗುವ ಪ್ರಶ್ನಾವಳಿಯಂತೆ ಸಾರ್ವಜನಿಕರಿಂದ ಮಾಹಿತಿ ಸಂಗ್ರಹಿಸಿ ಅ.2ರೊಳಗೆ ಸಮೀಕ್ಷೆ ಪೂರ್ಣಗೊಳಿಸಬೇಕು. ಸ್ವಚ್ಛತಾ ಹೀ ಸೇವಾ ಘೋಷವಾಕ್ಯದಡಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯಿಂದ ಅನುಷ್ಠಾನಗೊಳಿಸಲಾಗಿರುವ ವಿವಿಧ ಯೋಜನೆಗಳ ಮಾಹಿತಿ ಒಳಗೊಂಡ ರಾಯಚೂರು ಗ್ರಾಮೀಣ ಪತ್ರಿಕೆ ತ್ರೈಮಾಸಿಕ ಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು. ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ತಿರುಮಲರೆಡ್ಡಿ ಅವರಿಗೆ ಆಗಸ್ಟ್ ತಿಂಗಳ ಉತ್ತಮ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಇದೇ ಸಂದರ್ಭದಲ್ಲಿ ನಿರ್ಮಲ ನಿಲಯ ಅಭಿಯಾನಕ್ಕೆ ಚಾಲನೆ ನೀಡಿ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಈಶ್ವರ್ ಕಾಂದೂ ಮಾತನಾಡಿ, ಪೌಷ್ಟಿಕ ರಾಯಚೂರು ಯೋಜನೆಯಡಿ ಅಂಗನವಾಡಿ ಕೇಂದ್ರಗಳಿಗೆ ಪೌಷ್ಟಿಕ ಆಹಾರ ಪೂರೈಸುವ ಯೋಜನೆಗೆ ಕೆಕೆಆರ್‌ಡಿಬಿಯಿಂದ ಅನುದಾನ ಬಿಡುಗಡೆಗೆ ಅನುಮೋದನೆ ದೊರೆತಿದೆ. ಮಹತ್ವಾಕಾಂಕ್ಷಿ ತಾಲೂಕು ಕಾರ್ಯಕ್ರಮದಡಿ ಮಸ್ಕಿ ತಾಲೂಕಿನಲ್ಲಿ ಶಕ್ತಿ ಕೇಂದ್ರ ಆರಂಭಿಸಲು ನೀತಿ ಆಯೋಗದಿಂದ ಅನುದಾನ ಬಿಡುಗಡೆಯಾಗಿದ್ದು, ಅನುದಾನವನ್ನು ಶೀಘ್ರವಾಗಿ ಬಳಕೆ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಪಂ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕ ಶರಣಬಸವರಾಜ, ಮುಖ್ಯ ಯೋಜನಾಧಿಕಾರಿ ಡಾ. ಟಿ. ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂರ್ಕ,ರ್ ವಿವಿಧ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೆ.19ರಂದು ಗಿಲ್ಲೇಸೂಗುರದಲ್ಲಿ ಪ್ರಜಾ ಸೇವಾ ಆಂದೋಲನ

ತ್ವರಿತವಾಗಿ ಸ್ಪಂದಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಿದ್ದಾರೆ.

ಕಂದಾಯ, ಪಿಂಚಣಿ, ವಸತಿ, ಕುಡಿಯುವ ನೀರು, ರಸ್ತೆ, ವಿದ್ಯುತ್, ಸಾಮಾಜಿಕ ಭದ್ರತೆ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳು ಮತ್ತು ಸೇವೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ಹಾಗೂ ಅಗತ್ಯ ಮಾರ್ಗದರ್ಶನ ನೀಡಲಾಗುವುದು. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವುದು ಹಾಗೂ ಸರ್ಕಾರಿ ಸೇವೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಒಂದೇ ವೇದಿಕೆಯಲ್ಲಿ ಪರಿಹರಿಸಲು ನೆರವಾಗುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಸಂಬಂಧಿಸಿದ ಅಗತ್ಯ ದಾಖಲೆಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಆಯೋಜಕರು ಮನವಿ ಮಾಡಿದ್ದಾರೆ.

# ಪ್ರಧಾನಿ ನರೇಂದ್ರ ಮೋದಿ 76ನೇ ಜನ್ಮದಿನ ಆಚರಣೆ



ರಾಯಚೂರು: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 76ನೇ ಜನ್ಮದಿನವನ್ನು ನಗರದ ಶ್ರೀ ಸಾಯಿಬಾಬಾ ಜನ ಮಂದಿರದಲ್ಲಿ ಮೋದಿ ಅಭಿಮಾನಿಗಳು ಕೇಕ್ ಕತ್ತರಿಸುವ ಮೂಲಕ ಸಂಭ್ರಮದಿಂದ ಆಚರಿಸಿದರು.

ಮೋದಿ ಅಭಿಮಾನಿ ಬಂಗಿ ಮುನಿರೆಡ್ಡಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶ್ರೀ ಸಾಯಿಬಾಬಾಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಮತ್ತಷ್ಟು ಶಕ್ತಿ ದೊರೆಯಲಿ ಎಂದು ಭಕ್ತರು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಂಗಿ ಮುನಿರೆಡ್ಡಿ, ನರೇಂದ್ರ ಮೋದಿ ಅವರು ಗುಜರಾತ್ ಮುಖ್ಯಮಂತ್ರಿಯಾಗಿ ಸುಮಾರು 13 ವರ್ಷ ಸೇವೆ ಸಲ್ಲಿಸಿದ್ದು, 2014ರಿಂದ ದೇಶದ ಪ್ರಧಾನಮಂತ್ರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸರ್ಕಾರದ ಮುಖ್ಯಸ್ಥರಾಗಿ ಸುಮಾರು 25 ವರ್ಷಗಳ ಸುದೀರ್ಘ ಸಾರ್ವಜನಿಕ ಸೇವಾ ಪಯಣ ನಡೆಸಿರುವುದು ವಿಶೇಷವಾಗಿದೆ ಎಂದು ಹೇಳಿದರು.

ದೇಶದ ಜನರನ್ನು ತಮ್ಮ ಕುಟುಂಬದ ಸದಸ್ಯರಂತೆ ಪರಿಗಣಿಸಿ, ದೇಶದ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ ಎಂಬುದು ತಮ್ಮ ಅಭಿಪ್ರಾಯ ಎಂದು ಅವರು ತಿಳಿಸಿದರು. ದೇಶದ ಅಭಿವೃದ್ಧಿ, ಜನಕಲ್ಯಾಣ ಹಾಗೂ ಭಾರತದ ಪ್ರಗತಿಗಾಗಿ ಪ್ರಧಾನಿ ಮೋದಿ ಅವರಿಗೆ ಇನ್ನಷ್ಟು ಆರೋಗ್ಯ ಮತ್ತು ಶಕ್ತಿ ನೀಡುವಂತೆ ಶ್ರೀ ಸಾಯಿಬಾಬಾರಲ್ಲಿ ಪ್ರಾರ್ಥಿಸಲಾಗಿದೆ ಎಂದರು.

ಪ್ರಾರ್ಥನೆಯ ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಕೇಕ್ ಕತ್ತರಿಸಿ, ಪರಸ್ಪರ ಸಿಹಿ ಹಂಚುವ ಮೂಲಕ ಅಭಿಮಾನಿಗಳು ಸಂಭ್ರಮಿಸಿದರು. ಮೋದಿ ಅವರಿಗೆ ಶುಭಾಶಯಗಳನ್ನು ಕೋರಿದ ಅಭಿಮಾನಿಗಳು, ಅವರ ಉತ್ತಮ ಆರೋಗ್ಯ ಮತ್ತು ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಮೋದಿ ಅಭಿಮಾನಿ ಬಂಗಿ ಮುನಿರೆಡ್ಡಿ, ಸ್ಥಾಯಿ ಧ್ಯಾನಮಂದಿರದ ಸಂಸ್ಥಾಪಕ ಸಾಯಿ ಕಿರಣ್ ಅದೋನಿ, ಜಿತೇಂದ್ರ ಕುರ್ಮಾ, ಆಕಾಶ್ ಸೇರಿದಂತೆ ಮೋದಿ ಅಭಿಮಾನಿಗಳು ಹಾಗೂ ಶ್ರೀ ಸಾಯಿಬಾಬಾ ಮಂದಿರದ ಭಕ್ತರು ಭಾಗವಹಿಸಿದ್ದರು.

# ಸಾಹಸಸಿಂಹ ವಿಷ್ಣುವರ್ಧನ್ 76ನೇ ಜನ್ಮದಿನ ಆಚರಣೆ



ದೇವದುರ್ಗ: ಕನ್ನಡ ಚಲನಚಿತ್ರರಂಗದ ಮೇರು ನಟ, ಸಾಹಸಸಿಂಹ ಡಾ. ವಿಷ್ಣುವರ್ಧನ್ ಅವರ 76ನೇ ಜನ್ಮದಿನವನ್ನು ಪಟ್ಟಣದ ಶಾಂತಿನಗರದ ವಿಷ್ಣುವರ್ಧನ್ ವೃತ್ತದಲ್ಲಿ ವಿಷ್ಣುವರ್ಧನ್ ಅಭಿಮಾನಿಗಳ ಸಂಘ ಹಾಗೂ ಅಭಿಮಾನಿ ಬಳಗದ ವತಿಯಿಂದ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಹಾಗೂ ದೇವದುರ್ಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಚ್. ಶಿವರಾಜ್, ಕನ್ನಡ ಚಿತ್ರರಂಗದಲ್ಲಿ ಅಭಿನಯ ಭಾರ್ಗವ ಹಾಗೂ ಸಾಹಸಸಿಂಹ ಎಂಬ ಬಿರುದುಗಳಿಂದ ಜನಮನ ಗೆದ್ದ ಡಾ. ವಿಷ್ಣುವರ್ಧನ್ ಅವರು ವೈವಿಧ್ಯಮಯ ಪಾತ್ರಗಳ ಮೂಲಕ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದರು.

ನಾಗರಹಾವು, ಬಂಧನ, ಸಿಂಗಾಪೂರಿನಲ್ಲಿ ರಾಜಾಕುಳ್ಳ, ಗುರು ಶಿಷ್ಯರು, ಹೊಂಬಿಸಿಲು, ಕರುಣಾಮಯಿ, ಕರ್ಣ, ಊರಿಗೆ ಉಪಕಾರಿ, ಮತ್ತೆ ಹಾಡಿತು ಕೋಗಿಲೆ, ಜನನಾಯಕ, ದೇವ, ನಮ್ಮೂರ ಹಮ್ಮೀರ, ಆಪ್ತರಕ್ಷಕ, ನೀ ಬರೆದ ಕಾದಂಬರಿ, ಹೃದಯ ಗೀತೆ, ಸೂರ್ಯವಂಶ, ಜಮೀನ್ದಾರ, ಬಂಗಾರದ ಜಿಂಕೆ, ಜಿಮ್ಮಿಗಲ್ಲು, ಗಂಧರ್ವಗಿರಿ, ಕಿಟ್ಟು ಪುಟ್ಟು, ಕಳ್ಳ ಕುಳ್ಳ ಸೇರಿದಂತೆ ಅನೇಕ ಚಿತ್ರಗಳಲ್ಲಿ ಅಭಿನಯಿಸಿರುವ ವಿಷ್ಣುವರ್ಧನ್ ಅವರು ಸುಮಾರು ನಾಲ್ಕು ದಶಕಗಳ ಕಾಲ ಕನ್ನಡ ಚಿತ್ರರಂಗದಲ್ಲಿ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ. ಅವರ ಚಿತ್ರಗಳು ಇಂದಿಗೂ ಕನ್ನಡಿಗರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿವೆ ಎಂದು ಹೇಳಿದರು.

ಕನ್ನಡ ಚಿತ್ರರಂಗಕ್ಕೆ ವಿಷ್ಣುವರ್ಧನ್ ನೀಡಿರುವ ಅಮೂಲ್ಯ ಕೊಡುಗೆಯನ್ನು ಪರಿಗಣಿಸಿ ಅವರಿಗೆ ಮರಣೋತ್ತರವಾಗಿ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ನೀಡಬೇಕು ಎಂದು ಎಚ್. ಶಿವರಾಜ್ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ದೇವದುರ್ಗ ತಾಲೂಕು ವಿಷ್ಣುವರ್ಧನ್ ಅಭಿಮಾನಿಗಳ ಸಂಘದ ಅಧ್ಯಕ್ಷ ಅಯ್ಯಪ್ಪ ಕಟ್ಟಿಮನಿ, ದೇವದುರ್ಗ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ನರಸಿಂಗರಾವ್ ಸರ್ಕಿಲ್, ಸುದೀಪ ಅಭಿಮಾನಿಗಳ ಸಂಘದ ಅಧ್ಯಕ್ಷ ಹನುಮಯ್ಯ ನಾಯಕ್ ಕರಿಗುಡ್ಡ, ಆಟೋ ವಾಹನ ಸಂಘದ ಅಧ್ಯಕ್ಷ ರಫೀ, ಕರವೇ ಅಧ್ಯಕ್ಷ ಟಿ. ಜಯರಾಜ್, ಪ್ರಭುರಾಯ ದೊರೆ, ಅಂಬರೀಶ್ ಅಭಿಮಾನಿಗಳ ಸಂಘದ ಅಧ್ಯಕ್ಷ ಬಸವರಾಜ ಶೆಟ್ಟಿ, ಅಮೀದ್ ನಾಯಕ್, ರಾಜ ಅಂಬಿ, ಶಿವರಾಯ, ನಿರಂಜನ ಮಸರಕಲ್, ಯುವಸ್ಫೋಟ ಸಂಪಾದಕರು, ಆದರ್ಶ ನಾಯಕ, ಬಸನಗೌಡ ಅಳ್ಳುಂಡಿ ಸೇರಿದಂತೆ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು, ವಿಷ್ಣುವರ್ಧನ್ ಅಭಿಮಾನಿಗಳು, ಕನ್ನಡ ಹಾಗೂ ಚಿತ್ರಪ್ರೇಮಿಗಳು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ವಿಷ್ಣುವರ್ಧನ್ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸಿ ಜನ್ಮದಿನವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದವರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

# ಉತ್ತಮ ಸಂಸ್ಕಾರ, ಸರಿಯಾದ ಮಾರ್ಗದರ್ಶನ ಗುರುವಿನಿಂದ ದೊರೆಯುತ್ತದೆ: ರಾಜಶೇಖರ್



ಮಾನ್ವಿ: ವಿದ್ಯಾರ್ಥಿಗಳ ಬದುಕನ್ನು ಉತ್ತಮವಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಗುರುತಿಸಿಕೊಳ್ಳಬೇಕು ಎಂದು ಕಲ್ಮಠ ಶಾಲೆಯ ಹಳೆಯ ವಿದ್ಯಾರ್ಥಿ ಹಾಗೂ ಶಿಕ್ಷಕ ರಾಜಶೇಖರ್ ಎಚ್. ಹೇಳಿದರು.

ಪಟ್ಟಣದ ಕಲ್ಮಠ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ಸಾಧನೆ ಮಾಡಿ ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಬದುಕಿದಾಗ ಅವರನ್ನು ರೂಪಿಸಿದ ಶಿಕ್ಷಕರಿಗೂ ಹೆಮ್ಮೆ ಮತ್ತು ಸಂತಸವಾಗುತ್ತದೆ. ಇಂದಿನ ತಂತ್ರಜ್ಞಾನದ ಯುಗದಲ್ಲಿ ವಿದ್ಯಾರ್ಥಿಗಳಿಗೆ ಜ್ಞಾನವನ್ನು ಪಡೆದುಕೊಳ್ಳಲು ಅನೇಕ ಮಾರ್ಗಗಳು ಸುಲಭವಾಗಿ ಲಭ್ಯವಿದ್ದರೂ, ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಸರಿಯಾದ ಜೀವನ ಮಾರ್ಗವನ್ನು ಗುರುಗಳ ಮಾರ್ಗದರ್ಶನದಿಂದ ಪಡೆಯಲು ಸಾಧ್ಯ ಎಂದರು.

ವಿದ್ಯಾರ್ಥಿಗಳು ತಮ್ಮ ಶಿಕ್ಷಕರ ಮಾರ್ಗದರ್ಶನವನ್ನು ಗೌರವದಿಂದ ಸ್ವೀಕರಿಸಿ, ಉತ್ತಮ ಶಿಕ್ಷಣ ಪಡೆದು ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಶಾಲೆಯಲ್ಲಿ ಕಲಿತ ಜ್ಞಾನ ಮತ್ತು ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ಉಪಯುಕ್ತ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಸಲಹೆ ನೀಡಿದರು.

ಕಲ್ಮಠ ಶಾಲೆಯ ಹಳೆಯ ವಿದ್ಯಾರ್ಥಿನಿ ಹಾಗೂ ಜಿ.ಎಂ.ಎಚ್.ಪಿ.ಎಸ್. ಗುಂಜಳ್ಳಿ ಶಾಲೆಯ ಶಿಕ್ಷಕಿ ಹನುಮಂತಮ್ಮ ತಮ್ಮಾಪುರ ಮಾತನಾಡಿ ಶಿಕ್ಷಕರ ದಿನಾಚರಣೆಯ ಮಹತ್ವ ಹಾಗೂ ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಕರ ಪಾತ್ರದ ಕುರಿತು ತಮ್ಮ ಅನಿಸಿಕೆ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಶಾಲಾ ಸಂಸತ್ ಮುಖ್ಯಮಂತ್ರಿ ವೀರೇಶ್, ಪ್ರಾಥಮಿಕ ಶಾಲಾ ಸಂಸತ್ ಮುಖ್ಯಮಂತ್ರಿ ಅನಿಲಕುಮಾರ್ ಹಾಗೂ ವಿದ್ಯಾರ್ಥಿಗಳಾದ ಸೌಭಾಗ್ಯ, ಪೂಜಾ, ಮಲ್ಲಿಕಾರ್ಜುನ, ಸಾಗರ್ ಸೇರಿದಂತೆ ಹಲವರು ಶಿಕ್ಷಕರ ದಿನಾಚರಣೆ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಕಲ್ಮಠ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ, ಕಲ್ಮಠ ಪ್ರೌಢಶಾಲೆಯ ಮುಖ್ಯಗುರು ಪ್ರಭಯ್ಯ ಸ್ವಾಮಿ, ಪ್ರಾಥಮಿಕ ಶಾಲೆಯ ಮುಖ್ಯಗುರು ಮಂಜುನಾಥ ಕಮತರ, ಎಂ.ಎಂ. ಹಿರೇಮಠ, ಕೆಮ್ಮ್ಯಾನಾಯ್ಕ, ಭ್ರಮರಾಂಬ, ರವಿ ಹುಲಿಯಾಪುರ, ಜಯಶ್ರೀ, ಮಹಾಂತಮ್ಮ, ನರಸಿಂಹಲು, ರಾಘವೇಂದ್ರ, ರೂಪ, ಗೀತಾ, ಪ್ರಭಾವತಿ, ರಿಜ್ವಾನ, ಸೌಮ್ಯ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಕಾರಾತ್ಮಕ ಚಿಂತನೆಯಿಂದ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಿ: ಅಕ್ಕಮಕ್ಕನವರು



ಮಾನ್ವಿ: ಪಟ್ಟಣದ ಓಂ ಮಂಡಳಿ ಶಿವಶಕ್ತಿ ಅವತಾರ ಸೇವಾ ಕೇಂದ್ರದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಕೇಂದ್ರದ ಮಾನ್ವಿ ಸಂಚಾಲಕರಾದ ಅಕ್ಕಮಕ್ಕನವರು, ಪ್ರತಿಯೊಬ್ಬರೂ ತಮ್ಮಲ್ಲಿರುವ ಋಣಾತ್ಮಕ ಚಿಂತನೆಗಳನ್ನು ದೂರಮಾಡಿ ಸಕಾರಾತ್ಮಕ ಮನೋಭಾವ ಬೆಳೆಸಿಕೊಳ್ಳಬೇಕು. ಉತ್ತಮ ಸಂಸ್ಕಾರ ಮತ್ತು ಉನ್ನತ ವ್ಯಕ್ತಿತ್ವವನ್ನು ರೂಢಿಸಿಕೊಂಡಾಗ ಜೀವನವನ್ನು ಉತ್ತಮ ದಿಕ್ಕಿನಲ್ಲಿ ಮುನ್ನಡೆಸಲು ಸಾಧ್ಯ ಎಂದರು.

ಶ್ರೀಕೃಷ್ಣನ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆತ್ಮೋನ್ನತಿಯತ್ತ ಸಾಗಬೇಕು. ಸಕಾರಾತ್ಮಕ ಚಿಂತನೆ, ಸಂಸ್ಕಾರ ಹಾಗೂ ಸದ್ಗುಣಗಳು ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ದಾರಿಯಾಗುತ್ತವೆ ಎಂದು ತಿಳಿಸಿದರು.

# ಸೆ.23ರಂದು ಹಾನಗಲ್ ಕುಮಾರ ಸ್ವಾಮೀಜಿ 159ನೇ ಜಯಂತಿ: ವಿವಿಧ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮ




ಸಿಂಧನೂರು: ಹಾನಗಲ್ ಕುಮಾರ ಸ್ವಾಮೀಜಿ ಅವರ 159ನೇ ಜಯಂತಿ ಅಂಗವಾಗಿ ಸೆ.23ರಂದು ನಗರದಲ್ಲಿ ವಿವಿಧ ಧಾರ್ಮಿಕ, ಸಾಮಾಜಿಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಮಾಜಿ ಶಾಸಕ ವೆಂಕಟರಾವ್ ನಾಡಗೌಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಯಂತಿ ಕಾರ್ಯಕ್ರಮದ ಉದ್ಘಾಟನೆಗೆ ಅಖಿಲ ಭಾರತ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಆಗಮಿಸಲಿದ್ದಾರೆ. ರಾಜ್ಯದ ವಿವಿಧ ಭಾಗಗಳಿಂದ 100ಕ್ಕೂ ಹೆಚ್ಚು ಮಠಾಧೀಶರು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಜಯಂತಿ ಅಂಗವಾಗಿ ಗೋರೆಬಾಳದಿಂದ ಸಿಂಧನೂರಿನವರೆಗೆ ಬೃಹತ್ ಮೆರವಣಿಗೆ ಆಯೋಜಿಸಲಾಗಿದೆ. ಮೆರವಣಿಗೆಯು ಗಾಂಧಿ ಸರ್ಕಲ್, ಬಸವ ಸರ್ಕಲ್ ಹಾಗೂ ಚನ್ನಮ್ಮ ಸರ್ಕಲ್ ಮಾರ್ಗವಾಗಿ ಆರ್‌ಜಿಎಂ ಶಾಲಾ ಆವರಣ ತಲುಪಲಿದೆ. ಮೆರವಣಿಗೆಯಲ್ಲಿ ಡೊಳ್ಳು ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸಂಜೆ ಆರ್‌ಜಿಎಂ ಶಾಲಾ ಆವರಣದಲ್ಲಿ ವಿಶೇಷ ಪ್ರವಚನ ಕಾರ್ಯಕ್ರಮ ಜರುಗಲಿದೆ ಎಂದರು.

ಸಿಂಧನೂರಿನ 11 ವಾರ್ಡ್‌ಗಳು ಹಾಗೂ 11 ಗ್ರಾಮಗಳಲ್ಲಿ ಪಾದಯಾತ್ರೆ ನಡೆಸಲಾಗುವುದು. ಯುವಕರು ಸನ್ಮಾರ್ಗದಲ್ಲಿ ಸಾಗಬೇಕು ಹಾಗೂ ದುಶ್ಚಟ ಮತ್ತು ಮಾದಕ ವ್ಯಸನಗಳಿಂದ ದೂರವಿರಬೇಕು ಎಂಬ ಸಂದೇಶವನ್ನು ಸಾರುವ ಉದ್ದೇಶದಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸುವ ಮಠಾಧೀಶರು ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಯುವಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ತಿಳಿಸಿದರು.

ಹಾನಗಲ್ ಕುಮಾರ ಸ್ವಾಮೀಜಿ ಅವರು ಸಮಾಜ ಸಂಘಟನೆ ಹಾಗೂ ಸಮಾಜದ ಏಳಿಗೆಗಾಗಿ ಮಹತ್ವದ ಕೊಡುಗೆ ನೀಡಿದ್ದು, ವಿವಿಧ ಯಾತ್ರೆಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲು ಶ್ರಮಿಸಿದ್ದಾರೆ. ಅವರ ಆದರ್ಶ ಮತ್ತು ಸಂದೇಶಗಳನ್ನು ಯುವ ಪೀಳಿಗೆಗೆ ತಲುಪಿಸುವುದರ ಜೊತೆಗೆ ಮಾದಕ ವ್ಯಸನದಿಂದ ಯುವಕರನ್ನು ದೂರವಿಟ್ಟು ಸನ್ಮಾರ್ಗದತ್ತ ಕೊಂಡೊಯ್ಯುವುದು ಜಯಂತಿ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಎಲ್ಲ ಸಮಾಜಗಳ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಮಾಜಿ ಶಾಸಕ ವೆಂಕಟರಾವ್ ನಾಡಗೌಡ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ ಹಿರೇಗೌಡ, ಜಯಪ್ರಕಾಶ ಮಲ್ಲಾಪುರ, ರವಿಗೌಡ ಪನ್ನೂರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಸಾಪ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿ: ಭೀಮನಗೌಡ ಇಟಗಿ



ಮಾನ್ವಿ: ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಮುಂದಿನ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ಪ್ರಬಲ ಆಕಾಂಕ್ಷಿಯಾಗಿದ್ದು, ಜಿಲ್ಲೆಯ ವಿವಿಧ ತಾಲೂಕುಗಳ ಕಸಾಪ ಸದಸ್ಯರು, ಹಿರಿಯ ಸಾಹಿತಿಗಳು ಹಾಗೂ ಕನ್ನಡಪರ ಚಿಂತಕರೊಂದಿಗೆ ಚರ್ಚಿಸಿ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ ಎಂದು ಲೋಹಿಯಾ ಪ್ರತಿಷ್ಠಾನದ ಸಂಸ್ಥಾಪಕ ಹಾಗೂ ಸಾಹಿತ್ಯ ಸಂಘಟಕ ಭೀಮನಗೌಡ ಇಟಗಿ ತಿಳಿಸಿದರು.

ಪಟ್ಟಣದ ಸತ್ಯಸಾಯಿ ಫಂಕ್ಷನ್ ಹಾಲ್‌ನಲ್ಲಿ ಮಾತನಾಡಿದ ಅವರು, ಪ್ರಸ್ತುತ ಕಸಾಪ ಜಿಲ್ಲಾಧ್ಯಕ್ಷರ ಅವಧಿ ನ.23ಕ್ಕೆ ಪೂರ್ಣಗೊಳ್ಳಲಿದೆ. ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ಜಿಲ್ಲೆಯ ವಿವಿಧ ತಾಲೂಕುಗಳ ಚಿಂತಕರು, ಹಿರಿಯ ಸಾಹಿತಿಗಳು ಹಾಗೂ ಕಸಾಪ ಅಜೀವ ಸದಸ್ಯರು ಒತ್ತಾಯಿಸುತ್ತಿದ್ದಾರೆ. ಈಗಾಗಲೇ ಹಲವರೊಂದಿಗೆ ಚರ್ಚಿಸಿದ್ದು, ಹೆಚ್ಚಿನ ಸದಸ್ಯರು ಬೆಂಬಲದ ಭರವಸೆ ನೀಡಿದ್ದಾರೆ ಎಂದರು.

ಕನ್ನಡ ನಾಡು-ನುಡಿ ಹಾಗೂ ಸಾಹಿತ್ಯ ಕ್ಷೇತ್ರದ ಬೆಳವಣಿಗೆಗಾಗಿ ಕಳೆದ 30 ವರ್ಷಗಳಿಂದ ಜಿಲ್ಲೆಯಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದೇನೆ. ಹಿಂದಿನ ಎರಡು ಅವಧಿಗಳ ಜಿಲ್ಲಾಧ್ಯಕ್ಷರ ಚುನಾವಣೆಯಲ್ಲಿ ಅತ್ಯಂತ ಕಡಿಮೆ ಅಂತರದಲ್ಲಿ ಸೋಲು ಕಂಡಿದ್ದೇನೆ. ಈ ಬಾರಿ ಜಿಲ್ಲೆಯ ಎಲ್ಲ ತಾಲೂಕುಗಳ ಸದಸ್ಯರ ಬೆಂಬಲ ಮತ್ತು ಸಹಕಾರದೊಂದಿಗೆ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸುವುದಾಗಿ ಹೇಳಿದರು.

ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ತಾಯಪ್ಪ ಬಿ. ಹೊಸೂರು ಮಾತನಾಡಿ, ಭೀಮನಗೌಡ ಇಟಗಿ ಅವರು ಜಿಲ್ಲೆಯ ಸಾಹಿತ್ಯಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ವಿವಿಧ ತಾಲೂಕುಗಳ ಕಸಾಪ ಸದಸ್ಯರನ್ನು ಭೇಟಿಯಾಗಿ ಅಭಿಪ್ರಾಯ ಸಂಗ್ರಹಿಸುತ್ತಿದ್ದು, ಸದಸ್ಯರಿಂದ ಸಕಾರಾತ್ಮಕ ಸ್ಪಂದನೆ ದೊರೆಯುತ್ತಿದೆ. ಮುಂದಿನ ದಿನಗಳಲ್ಲಿ ಮಾನ್ವಿ ತಾಲೂಕಿನ ಕಸಾಪ ಸದಸ್ಯರ ಸಭೆ ಕರೆದು ಸಲಹೆ-ಸೂಚನೆಗಳನ್ನು ಪಡೆಯಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಂಗಮೇಶ ಮುಧೋಳ್, ದತ್ತಾತ್ರೇಯ, ವೈ. ಶ್ರೀನಿವಾಸ, ಜೆ.ಪಿ. ಅಮರೇಶ, ಡಾ. ಈರಣ್ಣ ಮರ್ಲಟ್ಟಿ, ಕೆ.ಇ. ನರಸಿಂಹಲು, ವೆಂಕಣ್ಣ ಯಾದವ್, ಎಚ್.ಟಿ. ಪ್ರಕಾಶಬಾಬು, ಲಕ್ಷ್ಮಣ ಜಾನೇಕಲ್, ಅರುಣಕುಮಾರ, ನಾಗರಾಜ ಕೊಳ್ಳಿ, ಹುಸೇನಪ್ಪ ನಂದಿಹಾಳ್, ಮೋಶಿನ್ ಖಾದ್ರಿ, ಬಸವರಾಜ ಜಂಗಮರಹಳ್ಳಿ, ಶ್ರೀಶೈಲ ಪತ್ತಾರ, ವೀರೇಶ ಯಾದವ್, ಬಸವರಾಜ ಕನ್ನಾರಿ, ಮೌನೇಶ ಪೋತ್ನಾಳ್ ಸೇರಿದಂತೆ ಕಸಾಪ ಸದಸ್ಯರು ಹಾಗೂ ಕನ್ನಡಾಭಿಮಾನಿಗಳು ಉಪಸ್ಥಿತರಿದ್ದರು.

### ಎಸ್.ಐ.ಆರ್ ವಿಶೇಷ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

# ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಿ: ಜಂಟಿ ನಿರ್ದೇಶಕ ಪರಮೇಶ್ವರ




ರಾಯಚೂರು ಸೆಪ್ಟಂಬರ್ 18 (ಕರ್ನಾಟಕ ವಾರ್ತೆ): ಯಾವುದೇ ಅರ್ಹರ ಮತದಾರ ಮತದಾರರ ಪಟ್ಟಿಯಿಂದ ಹೊರಗೆ ಉಳಿಯಬಾರದು ಬೇರೆ ಬೇರೆ ತಾಲೂಕುಗಳಿಂದ ತಾವು ದುಡಿಯಲು ಬಂದಿರುತ್ತೀರಿ ತಮ್ಮ ಹೆಸರು ಸಹ ಮತದಾರರ ಪಟ್ಟಿಯಲ್ಲಿ ಸೇರಿಸಬೇಕು ಶುದ್ಧ ಸ್ಪಷ್ಟ ಪಾರದರ್ಶಕ ಮಾದರಿಯ ಮತದಾರರಪಟ್ಟಿಯನ್ನು ತಯಾರಿಸುವುದೇ ಇದರ ಮೂಲ ಉದ್ದೇಶವಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಪರಮೇಶ್ವರ ಅವರು ಹೇಳಿದರು.

ಸೆಪ್ಟಂಬರ್ 16ರ ರಾಯಚೂರಿನ ಮಂಚುಕೊಡ ಆಗ್ರೋಟೆಕ್ ಪ್ರೈವೇಟ್ ಲಿಮಿಟೆಡ್ ಇಂಡಸ್ಟ್ರಿಯಲ್ ಏರಿಯಾದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ಎಸ್.ಐ.ಆರ್ ವಿಶೇಷ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

2026ರ ಅಕ್ಟೋಬರ 01ಕ್ಕೆ ಯಾವ ಯುವಕ, ಯುವತಿಯರು 18 ವರ್ಷ ಪೂರ್ಣಗೊಳ್ಳುತ್ತಾರೊ ಅವರು ಸಹ ತಮಗೆ ಸಂಬಧಪಟ್ಟ ಬಿ.ಎಲ್.ಓ ಅವರಿಗೆ ಸಂಪರ್ಕಿಸಿ ಫಾರ್ಮ ನಂಬರ್ 6ನ್ನು ತುಂಬಿಕೊಡಬಹುದು, ಮತದಾರರು ಮತದಾರಪಟ್ಟಿಯಿಂದ ಯಾವುದೇ ಕಾರಣಕ್ಕೂ ಹೊರಗೆ ಉಳಿಯಬಾರದೆಂದು ಈಗಾಗಲೇ ಮತದಾರರ ಪಟ್ಟಿಯವರು ರಾಯಚೂರು ಜಿಲ್ಲೆಯಲ್ಲಿ ಪ್ರಕಟಣೆ ಮಾಡಿದ್ದು, ಕೆಲವರು ಹೊರಗೆ ಉಳಿದಿದ್ದರೆ ಅಂತವರ ಸೆಪ್ಟಂಬರ್ 19 ಮತ್ತು 20 ರಂದು ಮತಗಟ್ಟೆಯಲ್ಲಿ ವಿಶೇಷ ಹೆಸರು ನೊಂದಣಿಯ ಕಾರ್ಯಕ್ರಮ ನಡಿಯುತ್ತದೆ. ಹೆಸರನ್ನು ಪುನಃ ಮತದಾರ ಪಟ್ಟಿಯಲ್ಲಿ ಸೇರಿಸುವ ಹಿನ್ನೆಲೆಯಲ್ಲಿ ವಿಶೇಷ ಅಭಿಯಾನ ಕಾರ್ಯಕ್ರಮವನ್ನು ಮಾಡಲಾಗುತ್ತದೆ ಎಂದರು.

ಈ ವೇಳೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ ಕುಲಕರ್ಣಿ ಅವರು ಮಾತನಾಡಿ, ಎಸ್.ಐ.ಆರ್ ಅರ್ಜಿಯನ್ನು ಸಕಾಲದಲ್ಲಿ ಭರ್ತಿಮಾಡಿ ಸಂಬದಪಟ್ಟ ಬಿ.ಎಲ್.ಓ ಇವರಿಗೆ ಸಂಪರ್ಕಿಸಿ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಣಿ ಮಾಡಿಸಬೇಕೆಂದರು.

ಈ ವೇಳೆ ಜಿಲ್ಲಾ ಸ್ವೀಪ್ ಸಮಿತಿ ಮಾಸ್ತರ್ ಟ್ರೈನಿ ದಂಡಪ್ಪ ಬಿರಾದಾರ ಅವರು ಮಾತನಾಡಿ, ವಿವಿಧ ಕೈಗಾರಿಕೆಗಳಲ್ಲಿ ಬಹಳಷ್ಟು ಜನ ವಿವಿಧ ಗ್ರಾಮೀಣ ಪ್ರದೇಶದಿಂದ ನಗರ ಪ್ರದೇಶಕ್ಕೆ ಬಂದು ವಾಸವಾಗಿರುತ್ತೀರಿ. ಉದ್ಯೋಗದ ನಿಮಿತ್ಯವಾಗಿ ತಾವು ಇಲ್ಲಿಗೆ ಬಂದಿರುತ್ತಿರಿ. ಮತದಾರರು ಮತದಾನ ದಿನ ಮತಗಟ್ಟೆಗೆ ಹೋಗಿ ಮತವನ್ನು ಚಲಾಯಿಸುವುದರ ಮೂಲಕ ಪ್ರಜಾಪ್ರಭುತ್ವ ಆಡಳಿತವನ್ನು ಬಲಪಡಿಸಬೇಕೆಂದರು.

ಈ ವೇಳೆ ಮೆ.ಎಸ್.ಪಿ.ಎಸ್ ಆಗ್ರೋನಿಕ್ಸ್ ಮಾಲಿಕರಾದ ಹಾಗೂ ರಾಜ್ಯ ರೈಸ್ ಮಿಲ್ಲ್ ಆಸೋಸಿಯೆಷನ್ ಅಧ್ಯಕ್ಷರಾದ ಚಂದ್ರು ಮಂಚಕೊಡ ಅವರು ಮಾತಾನಾಡಿ, ನಮ್ಮ ಕೈಗಾರಿಕೆ ವಲಯದಲ್ಲಿರುವ ಕೂಲಿ ಕಾರ್ಮಿಕರು ಮತದಾರರು ಮತದಾರಪಟ್ಟಿಯಿಂದ ಯಾವುದೇ ಕಾರಣಕ್ಕೂ ಹೊರಗೆ ಉಳಿಯಬಾರದೆಂದರು.

ಇದೇ ಸಂದರ್ಭದಲ್ಲಿ ಕೈಮಗ್ಗ ಜವಳಿ ಇಲಾಖೆಯ ಸಹಾಯಕ ನಿರ್ದೇಶಕರಾದ ವಸಂತ ಕುಮಾರ ಎಸ್. ಸೇರಿದಂತೆ ಇತರರು ಇದ್ದರು.

# ಸಮಾಜ ಕಲ್ಯಾಣ ಇಲಾಕೆಯಿಂದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

ರಾಯಚೂರು ಸೆ. 18 (ಕರ್ನಾಟಕ ವಾರ್ತೆ): ಸಮಾಜ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನಲ್ಲಿ ಮಹಾರಾಷ್ಟದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ನಾಗಪುರ ದೀಕ್ಷಾಭೂಮಿ ಯಾತ್ರೆ ಕೈಗೊಳ್ಳಲು ಕೆ.ಎಸ್.ಆರ್.ಟಿ.ಸಿ. ಮತ್ತು ಇತರೆ ಸಾರಿಗೆ ಬಸ್ಸು ಮತ್ತು ರೈಲಿನ ಮೂಲಕ ವ್ಯವಸ್ಥೆಯನ್ನು ಇಲಾಖೆಯಿಂದ ಕಲ್ಪಿಸಲಾಗುತ್ತಿದ್ದು, ದೀಕ್ಷಾಭೂಮಿಗೆ ಭೇಟಿ ನೀಡುವ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಲಿಂಕ್ https://swd.karnataka.gov.in ನಲ್ಲಿ ಅಕ್ಟೋಬರ್ 09ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843042 ಅಥವಾ ಆಯಾ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗಳಾದ ರಾಯಚೂರು 8861112622, ಮಾನ್ವಿ 7892001967, ಸಿಂಧನೂರು 9880304790, ಲಿಂಗಸುಗೂರು 9902758863, ದೇವದುರ್ಗ 9880882915ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಪಿಎಫ್‌ಓ ವೇತನ ಮಿತಿ ಹೆಚ್ಚಳಕ್ಕೆ ಕೇಂದ್ರ ಸಚಿವ ಸಂಪುಟದ ಅನುಮೋದನೆ

ರಾಯಚೂರು ಸೆ. 18 (ಕರ್ನಾಟಕ ವಾರ್ತೆ): ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯು ಇಪಿಎಫ್‌ಓ ಅಡಿಯಲ್ಲಿ ಕಡ್ಡಾಯ ವ್ಯಾಪ್ತಿಗೆ ಒಳಪಡುವ ವೇತನ ಮಿತಿಯನ್ನು ತಿಂಗಳಿಗೆ 15,000 ರಿಂದ 25,000ಕ್ಕೆ ಹೆಚ್ಚಿಸಲು ಅನುಮೋದನೆ ನೀಡಿದೆ.

ಈ ನಿರ್ಧಾರದಿಂದ 51 ಲಕ್ಷಕ್ಕೂ ಹೆಚ್ಚು ಹೆಚ್ಚುವರಿ ಉದ್ಯೋಗಿಗಳು ಇಪಿಎಫ್‌ಓ ವ್ಯಾಪ್ತಿಗೆ ಬರುವ ನಿರೀಕ್ಷೆಯಿದ್ದು, ಸಾಮಾಜಿಕ ಭದ್ರತಾ ಸೌಲಭ್ಯಗಳ ವ್ಯಾಪ್ತಿ ಮತ್ತಷ್ಟು ವಿಸ್ತರಿಸಲಿದೆ. 2014ರ ನಂತರದ ವೇತನ, ಆದಾಯ ಹಾಗೂ ಔಪಚಾರಿಕ ಉದ್ಯೋಗದಲ್ಲಿನ ಏರಿಕೆಯನ್ನು ಪರಿಗಣಿಸಿ ಕೈಗೊಂಡಿರುವ ಈ ಕ್ರಮವು ಉದ್ಯೋಗದ ಔಪಚಾರಿಕೀಕರಣ, ಉದ್ಯೋಗಿಗಳ ಉಳಿಕೆ ಹಾಗೂ ದೀರ್ಘಕಾಲೀನ ನಿವೃತ್ತಿ ಭದ್ರತೆಯನ್ನು ಮತ್ತಷ್ಟು ಬಲಪಡಿಸಲಿದೆ.

ಸರ್ಕಾರದ ವಾರ್ಷಿಕ ವೆಚ್ಚವು ಸುಮಾರು 11,339 ಕೋಟಿಯಾಗಿದ್ದು, ಐದು ವರ್ಷಗಳಲ್ಲಿ ಅಂದಾಜು 56,696 ಕೋಟಿಯಾಗಲಿದೆ. ಈ ನಿರ್ಧಾರದ ಅನುಷ್ಠಾನಕ್ಕಾಗಿ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಹಾಗೂ ಇಈಔ ಅಗತ್ಯ ಕಾನೂನುಬದ್ಧ ಮತ್ತು ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಲಿದ್ದು, ಇದು ವಿಕಾಸಿತ್ ಭಾರತ್2047ರ ದೃಷ್ಟಿಕೋನದತ್ತ ಭಾರತದ ಸಾಮಾಜಿಕ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಇಪಿಎಫ್‌ಓ ಪ್ರಾದೇಶಿಕ ಕಚೇರಿಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮನಿಷ್ಠೆ, ಶಿಸ್ತು ಜೀವನದಲ್ಲಿ ಅಳವಡಿಸಿಕೊಳ್ಳಬೇಕು: ಗಜದಂಡ ಶ್ರೀ



ಲಿಂಗಸುಗೂರು: ಪ್ರಜಾಪತಿ ದಕ್ಷನ ಸಂಹಾರಕ್ಕಾಗಿ ಶಿವನ ಅಂಶದಿಂದ ಅವತರಿಸಿದ ವೀರಭದ್ರೇಶ್ವರನು ಧರ್ಮರಕ್ಷಣೆಯ ಪ್ರತೀಕವಾಗಿದ್ದು, ಅವರ ಧರ್ಮನಿಷ್ಠೆ, ಶಿಸ್ತು ಹಾಗೂ ಸತ್ಕಾರ್ಯಗಳ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ದೇವರಭೂಪುರ ಬೃಹನ್ಮಠದ ಅಮರೇಶ್ವರ ಗುರುಗಜದಂಡ ಶಿವಾಚಾರ್ಯರು ಹೇಳಿದರು.

ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಶ್ರೀ ವೀರಭದ್ರೇಶ್ವರ ಜಯಂತಿ ಕಾರ್ಯಕ್ರಮದ ಅಂಗವಾಗಿ ವೀರಭದ್ರೇಶ್ವರ ಮೂರ್ತಿಯ ಪಲ್ಲಕ್ಕಿ ಹಾಗೂ ಪುರವಂತ ಸೇವೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದ ಅವರು, ಪ್ರಜಾಪತಿ ದಕ್ಷನು ನಡೆಸಲು ಮುಂದಾದ ಯಜ್ಞಕ್ಕೆ ಶಿವನನ್ನು ಆಹ್ವಾನಿಸದೇ ದೇವತೆಗಳ ಸಮ್ಮುಖದಲ್ಲೇ ಅವಮಾನಿಸಿದನು. ಪತಿಯ ಅವಮಾನವನ್ನು ಸಹಿಸಲಾಗದೇ ಸತಿಯು ಯಜ್ಞದ ಅಗ್ನಿಕುಂಡದಲ್ಲಿ ಆಹುತಿಯಾದಳು. ಇದರಿಂದ ಆಕ್ರೋಶಗೊಂಡ ಶಿವನ ಅಂಶದಿಂದ ವೀರಭದ್ರ ಹಾಗೂ ಭದ್ರಕಾಳಿ ಅವತರಿಸಿ, ಶಿವನ ಆಜ್ಞೆಯಂತೆ ಸೈನ್ಯ ಸಮೇತ ದಕ್ಷನ ಯಜ್ಞಸ್ಥಳಕ್ಕೆ ತೆರಳಿ ದಕ್ಷನ ಸಂಹಾರ ಮಾಡಿದರು ಎಂದು ಪೌರಾಣಿಕ ಪ್ರಸಂಗವನ್ನು ವಿವರಿಸಿದರು.

ಪ್ರಜಾಪತಿಯಾಗಿ ಸಮಾಜದ ರಕ್ಷಣೆಯ ಹೊಣೆ ಹೊತ್ತವನು ಸತ್ಕಾರ್ಯಗಳನ್ನು ಬಿಟ್ಟು ಅಧರ್ಮ, ದುಷ್ಕೃತ್ಯ ಮತ್ತು ಅಪಕೃತ್ಯಗಳಲ್ಲಿ ತೊಡಗಿದರೆ ಧರ್ಮರಕ್ಷಣೆಗೆ ದೈವಶಕ್ತಿ ಅವತರಿಸುತ್ತದೆ ಎಂಬ ಸಂದೇಶವನ್ನು ವೀರಭದ್ರನ ಅವತಾರ ಸಾರುತ್ತದೆ. ವೀರಭದ್ರೇಶ್ವರನ ಧರ್ಮನಿಷ್ಠೆ, ಶಿಸ್ತು, ನಡೆ-ನುಡಿ ಹಾಗೂ ಕರ್ತವ್ಯಪ್ರಜ್ಞೆಯನ್ನು ಜೀವನದಲ್ಲಿ ಅಳವಡಿಸಿಕೊಂಡರೆ ವ್ಯಕ್ತಿ ಉತ್ತಮ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ. ಪರೋಪಕಾರ ಹಾಗೂ ಧರ್ಮಕಾರ್ಯಗಳಲ್ಲಿ ತೊಡಗಿದಾಗ ಭಗವಂತನ ಅನುಗ್ರಹ ದೊರೆಯುತ್ತದೆ ಎಂದು ಹೇಳಿದರು.

ಜಯಂತಿ ಅಂಗವಾಗಿ ಬೆಳಿಗ್ಗೆ ವೀರಭದ್ರೇಶ್ವರ ಮೂರ್ತಿಗೆ ಅರ್ಚಕರಾದ ಶಂಭುಲಿಂಗಯ್ಯ ಕಳಸದಗುಡಿ ಹಾಗೂ ವೀರಭದ್ರಯ್ಯ ಹಿರೇಮಠ ಅವರ ನೇತೃತ್ವದಲ್ಲಿ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ವಿಶೇಷ ಪುಷ್ಪಾಲಂಕಾರ ಹಾಗೂ ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದವು.

ಬಳಿಕ ದೊಡ್ಡ ಹನುಮಂತ ದೇವಸ್ಥಾನದಿಂದ ಈಶ್ವರ ದೇವಸ್ಥಾನದವರೆಗೆ ವೀರಭದ್ರೇಶ್ವರ ಮೂರ್ತಿಯ ಭವ್ಯ ಮೆರವಣಿಗೆ ನಡೆಯಿತು. ಮಹಿಳೆಯರು ಕುಂಭ-ಕಳಶ ಹೊತ್ತು ಮೆರವಣಿಗೆಯಲ್ಲಿ ಭಾಗವಹಿಸಿದರು. ಪುರವಂತರ ಸೇವೆ ಹಾಗೂ ಧಾರ್ಮಿಕ ಆಚರಣೆಗಳು ಭಕ್ತರಲ್ಲಿ ಭಕ್ತಿಭಾವ ಮೂಡಿಸಿದವು.

ಈ ಸಂದರ್ಭದಲ್ಲಿ ಮಾಣಿಕೇಶ್ವರಿ ಮಠದ ನಂದಿಕೇಶ್ವರಿ ಮಾತಾ, ದೇವಸ್ಥಾನ ಸಮಿತಿ ಅಧ್ಯಕ್ಷ ಡಾ. ಎನ್.ಎಲ್. ನಡುವಿನಮನಿ, ಡಾ. ಶರಣಗೌಡ ಪಾಟೀಲ್, ಮಲ್ಲಣ್ಣ ವಾರದ, ರಾಜು ಪಲ್ಲೇದ, ಜಗದೀಶ ಹಿರೇಮಠ, ಮಹೇಶ ನಂದಿಕೋಲಮಠ, ಎಂ.ಜಿ. ಹಿರೇಮಠ, ಶಿವಕುಮಾರ ನಂದಿಕೋಲಮಠ, ಅಮರೇಶ ಗಂಭೀರಮಠ, ವೀರಭದ್ರಯ್ಯ ಯಲಗಲದಿನ್ನಿ, ರಾಜು ತಂಬಾಕೆ, ಮಹಾಂತೇಶ, ವೀರೇಶ ಜಗವತಿಮಠ, ವೀರೇಶ ಚನ್ನಿ, ನಾಗಪ್ಪ ಬೋರಾವತ್, ಆದಪ್ಪ ದೇವದುರ್ಗ, ಗುಂಡಯ್ಯ ಸೊಪ್ಪಿಮಠ, ಅಮರಯ್ಯ ಯರಡೋಣ, ಡಾ. ಸುಭಾಷ ಪಲ್ಲೇದ, ಬಸವರಾಜ ಬ್ಯಾಳಿ, ಶ್ರೀಕಾಂತ ಮಠ, ನಾಗರಾಜ ತಿಳಿ, ಅಮರೇಶ ತಿಳಿ, ಶಂಭುಲಿಂಗಯ್ಯ ಕಳಸದಗುಡಿ, ವೀರಭದ್ರಯ್ಯ ಹಿರೇಮಠ, ವೀರೇಶ ಕಸಬಾಲಿಂಗಸುಗೂರು ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K